EMAIL : dairyadadaari@gmail.com ಸಂಪುಟ: 01 ಸಂಚಿಕೆ: 133

ಬೆಲೆ ರೂ : 2.00

ರಾಯಚೂರು

ಪುಟ: 4

ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಶನಿವಾರ: 02-05-2026



ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793


## ಬಿಗ್ ಶಾಕ್ : ವಾಣಿಜ್ಯ ಬಳಕೆ ಸಿಲಿಂಡರ್ ದರ ಏರಿಕೆ..!

**ನವದೆಹಲಿ, ಮೇ 1–** ವಿಶ್ವ ಕಾರ್ಮಿಕ ದಿನಾಚರಣೆ ದಿನವೇ ವಾಣಿಜ್ಯ ಬಳಕೆಯ ಸಿಲಿಂಡರ್ ಬೆಲೆ ದಿಢೀರ್ ಏರಿಕೆಯಾಗಿದೆ. ಇಂದಿನಿಂದ ಜಾರಿಗೆ ಬರುವಂತೆ 19 ಕೆಜಿ ತೂಕದ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ಗಳ ಬೆಲೆ ಬರೋಬ್ಬರಿ 993 ರೂ. ಹೆಚ್ಚಿಸಲಾಗಿದೆ.ಈ ಭಾರಿ ಏರಿಕೆಯ ನಂತರ, ರಾಜಧಾನಿ ದೆಹಲಿಯಲ್ಲಿ ವಾಣಿಜ್ಯ ಸಿಲಿಂಡರ್‌ನ ಬೆಲೆ 3,071.50 ರೂ.ಗೆ ತಲುಪಿದೆ. ಇದು ಹೋಟೆಲ್ ರೆಸ್ಟೋರೆಂಟ್ ಮತ್ತು ಇತರ ವಾಣಿಜ್ಯ ಸಂಸ್ಥೆಗಳ ಮೇಲೆ ನೇರ ಪರಿಣಾಮ ಬೀರಲಿದೆ ಎಂದು ಮೂಲಗಳು ತಿಳಿಸಿವೆ.

ಇದಕ್ಕೂ ಮೊದಲು ದೆಹಲಿಯಲ್ಲಿ ವಾಣಿಜ್ಯ ಸಿಲಿಂಡರ್ ಬೆಲೆ 2,078.50 ರೂಪಾಯಿ ಇತ್ತು. ಬೆಂಗಳೂರಿನಲ್ಲಿ 991 ರೂಪಾಯಿ ಏರಿಕೆಯಾಗಿದ್ದು, ಇಂದಿನಿಂದ ಒಂದು ಕಮರ್ಷಿಯಲ್ ಸಿಲಿಂಡರ್ ಬೆಲೆ ಬರೋಬ್ಬರಿ 3,152 ರೂ. ಆಗಲಿದೆ.ವಾಣಿಜ್ಯ ಸಿಲಿಂಡರ್ ಬೆಲೆ ಏರಿಕೆಯಾಗಿದ್ದರೂ, ಗೃಹ ಬಳಕೆಯ (14.2 ಕೆಜಿ) ಸಿಲಿಂಡರ್ ಬೆಲೆಯಲ್ಲಿ ಯಾವುದೇ ಬದಲಾವಣೆಯಾಗಿಲ್ಲ.

ಜಾಗತಿಕ ಇಂಧನ ಬೆಲೆಗಳ ಏರಿಕೆ ಮತ್ತು ಪಶ್ಚಿಮ ಏಷ್ಯಾದಲ್ಲಿನ ಉದ್ವಿಗ್ನತೆಯ ಹಿನ್ನೆಲೆಯಲ್ಲಿ ಈ ದರ ಪರಿಷ್ಕರಣೆ ಮಾಡಲಾಗಿದೆ.ಈ ಏರಿಕೆಯು ಹೋಟೆಲ್, ರೆಸ್ಟೋರೆಂಟ್ ಮತ್ತು ಸಣ್ಣ ವ್ಯಾಪಾರಿಗಳ ಮೇಲೆ ಹೆಚ್ಚಿನ ಆರ್ಥಿಕ ಹೊರೆಯನ್ನು ಉಂಟುಮಾಡಲಿದ್ದು ಆಹಾರ ಪದಾರ್ಥಗಳ ಬೆಲೆ ಏರಿಕೆಯಾಗಲಿದೆ.




ಗೃಹ ಬಳಕೆ ಗ್ರಾಹಕರಿಗೆ ನಿರಾಳ: ಪೆಟ್ರೋಲ್, ಡೀಸೆಲ್ ಮತ್ತು ದೇಶೀಯ ಸಿಲಿಂಡರ್ ದರ ಸ್ಥಿರ ವಾಣಿಜ್ಯ ಸಿಲಿಂಡರ್ ಬೆಲೆ ಏರಿಕೆಯಾಗಿದ್ದರೂ, ಸಾರ್ವಜನಿಕರಿಗೆ ನೇರವಾಗಿ ಅನ್ವಯವಾಗುವ ಪ್ರಮುಖ ಇಂಧನ ದರಗಳಲ್ಲಿ ಯಾವುದೇ ಬದಲಾವಣೆ ಮಾಡಲಾಗಿಲ್ಲ.

ದೇಶದಲ್ಲಿ ಸುಮಾರು 33 ಕೋಟಿ ಗ್ರಾಹಕರು ಬಳಸುವ 14.2 ಕೆಜಿ ದೇಶೀಯ ಸಿಲಿಂಡರ್ ಬೆಲೆಗಳು ಯಥಾಸ್ಥಿತಿಯಲ್ಲಿರುವುದು ಗ್ರಾಹಕರಲ್ಲಿ ನಿರಾಳತೆ ಮೂಡಿಸಿದೆ. ವಾಹನ ಸವಾರರು ಬಳಸುವ ಪೆಟ್ರೋಲ್ ಮತ್ತು ಡೀಸೆಲ್ ಚಿಲ್ಲರೆ ಬೆಲೆಗಳಲ್ಲಿ ಯಾವುದೇ ಬದಲಾವಣೆಯಾಗಿಲ್ಲ. ಸಾರ್ವಜನಿಕ ವಿತರಣಾ ವ್ಯವಸ್ಥೆ ಅಡಿಯಲ್ಲಿ ವಿತರಿಸಲಾಗುವ ಸೀಮೆಎಣ್ಣೆಯ ಬೆಲೆಗಳು ಕೂಡ ಬದಲಾಗದೆ ಉಳಿದಿವೆ ಎಂದು ವರದಿಯಾಗಿದೆ. ಎಟಿಎಫ್ ಬೆಲೆ ಯಥಾಸ್ಥಿತಿ : ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಇಂಧನ ಬೆಲೆಗಳು ಏರಿಕೆಯಾಗಿದ್ದರೂ, ದೇಶೀಯ ವಿಮಾನಯಾನ ಸಂಸ್ಥೆಗಳಿಗೆ ನೀಡಲಾಗುವ ವಿಮಾನಯಾನ ಟರ್ಬೈನ್ ಇಂಧನ ಬೆಲೆಗಳಲ್ಲೂ ಯಾವುದೇ ಬದಲಾವಣೆಯಾಗಿಲ್ಲ.ಗ್ರಾಹಕರು ಮತ್ತು ವಿಮಾನಯಾನ ಸಂಸ್ಥೆಗಳನ್ನು ರಕ್ಷಿಸಲು ಸರ್ಕಾರಿ ಸ್ವಾಮ್ಯದ ತೈಲ ಕಂಪನಿಗಳು ಅಂತರರಾಷ್ಟ್ರೀಯ ಬೆಲೆ ಏರಿಕೆಯ ಹೊರೆಯನ್ನು ತಾವೇ ಹೊರಲು ನಿರ್ಧರಿಸಿವೆ ಎಂದು ಐಒಸಿ ತಿಳಿಸಿದೆ.

ಆದರೆ, ಅಂತರರಾಷ್ಟ್ರೀಯ ವಿಮಾನಯಾನ ಸಂಸ್ಥೆಗಳಿಗೆ ಇಂಧನ ಬೆಲೆಗಳನ್ನು ಹೆಚ್ಚಿಸಲಾಗಿದೆ.ತೈಲ ಮಾರುಕಟ್ಟೆ ಕಂಪನಿಗಳ ಈ ನಿರ್ಧಾರದಿಂದಾಗಿ, ಮಾರುಕಟ್ಟೆಯಲ್ಲಿ ಲಭ್ಯವಿರುವ ಸುಮಾರು ಶೇ 80 ರಷ್ಟು ಪೆಟ್ರೋಲಿಯಂ ಉತ್ಪನ್ನಗಳ ಬೆಲೆಗಳಲ್ಲಿ ಯಾವುದೇ ಬದಲಾವಣೆಯಾಗಿಲ್ಲ. ಇದು ಬಹುಪಾಲು ಗ್ರಾಹಕರಿಗೆ ಸ್ಥಿರತೆಯನ್ನು ಖಚಿತಪಡಿಸಿದೆ.

ಶೇ.4 ರಷ್ಟು ಉತ್ಪನ್ನಗಳು ಬೆಲೆ ಇಳಿಕೆಯನ್ನು ಕಂಡಿದ್ದರೆ, ಕೇವಲ ಶೇ.16 ರಷ್ಟು ಇಂಧನಗಳು (ಮುಖ್ಯವಾಗಿ ಕೈಗಾರಿಕಾ ಬಳಕೆಯವು) ಬೆಲೆ ಏರಿಕೆಯನ್ನು ದಾಖಲಿಸಿವೆ.ಅಂತಾರಾಷ್ಟ್ರೀಯ ಬೆಲೆ ಏರಿಳಿತಗಳಿಂದ ದೇಶೀಯ ಗ್ರಾಹಕರನ್ನು ರಕ್ಷಿಸುವ ಮತ್ತು ಆರ್ಥಿಕ ಸ್ಥಿರತೆಯನ್ನು ಕಾಪಾಡುವ ಉದ್ದೇಶದಿಂದ ಈ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಐಒಸಿ ಸ್ಪಷ್ಟಪಡಿಸಿದೆ.

## ವಿದ್ಯುತ್ ದರ ಪ್ರತಿ ಯೂನಿಟ್‌ಗೆ 56 ಪೈಸೆ ಹೆಚ್ಚಳ




**ಬೆಂಗಳೂರು: ಮೇ 1–** ರಾಜ್ಯದ ಗೃಹಬಳಕೆ ವಿದ್ಯುತ್ ಗ್ರಾಹಕರಿಗೆ ಮತ್ತೊಂದು ಬೆಲೆ ಏರಿಕೆಯ ಶಾಕ್ ಎದುರಾಗಿದೆ. ಕೆ.ಇ.ಆರ್.ಸಿ (KERC) ವಿದ್ಯುತ್ ದರವನ್ನು ಹೆಚ್ಚಿಸಿ ಆದೇಶ ಹೊರಡಿಸಿದೆ.

ಇಂದಿನಿಂದಲೇ ಗೃಹಬಳಕೆ ವಿದ್ಯುತ್ ದರದಲ್ಲಿ ಏರಿಕೆ ಜಾರಿಯಾಗಿದ್ದು, ಪ್ರತಿ ಯೂನಿಟ್‌ಗೆ 56 ಪೈಸೆ ಹೆಚ್ಚಳ ಮಾಡಲಾಗಿದೆ. ಮೇ ತಿಂಗಳ ಬಿಲ್‌ನಿಂದ ಈ ಹೊಸ ದರ ಅನ್ವಯವಾಗಲಿದೆ. ಎಸ್ಕಾಂಗಳು ಸಲ್ಲಿಸಿದ್ದ ಪ್ರಸ್ತಾವನೆಯನ್ನು ಪರಿಗಣಿಸಿದ ಕೆಇಆರ್ಸಿ, ಈ ದರ ಏರಿಕೆಗೆ ಮಂಜೂರು ನೀಡಿದೆ.2024–25ನೇ ಆರ್ಥಿಕ ವರ್ಷದಲ್ಲಿ ವಿದ್ಯುತ್ ಮಾರಾಟದಿಂದ 34,084 ಕೋಟಿ ರೂಪಾಯಿ ಆದಾಯ ನಿರೀಕ್ಷಿಸಲಾಗಿತ್ತು. ಆದರೆ, ಕೇವಲ 32,019 ಕೋಟಿ ರೂಪಾಯಿ ಆದಾಯ ಮಾತ್ರ ಬಂದಿದ್ದು, ಸುಮಾರು 2,068 ಕೋಟಿ ರೂಪಾಯಿ ಕೊರತೆ ಉಂಟಾಗಿದೆ. ಈ ಕೊರತೆಯನ್ನು ಪೂರೈಸಲು ಗ್ರಾಹಕರಿಂದಲೇ ಸಂಗ್ರಹಿಸುವಂತೆ ಕೆಇಆರ್ಸಿ ಆದೇಶಿಸಿದೆ. ಅದರ ಭಾಗವಾಗಿ ಪ್ರತಿ ಯೂನಿಟ್‌ಗೆ 56 ಪೈಸೆ ಹೆಚ್ಚಳ ಮಾಡಲಾಗಿದೆ.

ದರ ಏರಿಕೆಯಿಂದ ಈಗಾಗಲೇ ಬೆಲೆ ಏರಿಕೆಯಿಂದ ಸಂಕಷ್ಟದಲ್ಲಿರುವ ಜನರಿಗೆ ಮತ್ತಷ್ಟು ಭಾರವಾಗಲಿದೆ

## ಬುದ್ಧನ ಆದರ್ಶ ಪಾಲನೆಯಿಂದ ಸುಂದರ ಸಮಾಜ ನಿರ್ಮಾಣ ಸಾಧ್ಯ: ಪ. ಪಂ.ಅಧ್ಯಕ್ಷ ಹಾಜಿ ಚೌದ್ರಿ ಅಭಿಮತ



ಧೈರ್ಯದ ದಾರಿ

**ಸಿರವಾರ:** ಸ್ಥಳೀಯ ಪಟ್ಟಣ ಪಂಚಾಯತ್ ಕಾರ್ಯಾಲಯದಲ್ಲಿ ಇಂದು ಭಗವಾನ್ ಗೌತಮ ಬುದ್ಧರ ಜಯಂತಿಯನ್ನು ಅತ್ಯಂತ ಸಡಗರ ಮತ್ತು ಗೌರವಪೂರ್ವಕವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಪಟ್ಟಣ ಪಂಚಾಯಿತಿ ಅಧ್ಯಕ್ಷರಾದ ಹಾಜಿ ಚೌದ್ರಿ ಅವರು, ಬುದ್ಧನ ಶಾಂತಿ ಮತ್ತು ಅಹಿಂಸೆಯ ಸಂದೇಶಗಳು ಇಂದಿನ ಜಗತ್ತಿಗೆ ಅತ್ಯಗತ್ಯವಾಗಿವೆ ಎಂದು ತಿಳಿಸಿದರು.

**ಆದರ್ಶಗಳ ಪಾಲನೆ:** ಮಾಜಿ ಪಟ್ಟಣ ಪಂಚಾಯತ್ ಅಧ್ಯಕ್ಷರಾದ ವೈ. ಭೂಪನಗೌಡ ಅವರು ಮಾತನಾಡಿ, "ಬುದ್ಧ ಕೇವಲ ಒಂದು ಧರ್ಮಕ್ಕೆ ಸೀಮಿತವಾದವರಲ್ಲ; ಅವರು ಜಗತ್ತಿಗೆ ಜ್ಞಾನದ ಬೆಳಕು ನೀಡಿದ ಮಹಾಪುರುಷ. ಅವರು ಹಾಕಿಕೊಟ್ಟ ಅಹಿಂಸೆ, ಕರುಣೆ ಮತ್ತು ಸಮಾನತೆಯ ಆದರ್ಶಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು," ಎಂದು ಕರೆ ನೀಡಿದರು.

**ಗೌರವ ನಮನ:** ಕಾರ್ಯಕ್ರಮದ ಆರಂಭದಲ್ಲಿ ಬುದ್ಧನ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಜ್ಞಾನೋದಯದ ಹಾದಿಯ ಬಗ್ಗೆ ಸ್ಮರಿಸಲಾಯಿತು.

**"ಬುದ್ಧನ ತತ್ವಗಳು ಸಮಾಜದಲ್ಲಿ ಶಾಂತಿ ಮತ್ತು ಸೌಹಾರ್ದತೆಯನ್ನು ಕಾಪಾಡಲು ದಾರಿದೀಪವಾಗಿವೆ." – ಹಾಜಿ ಚೌದ್ರಿ, ಅಧ್ಯಕ್ಷರು.**

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತಿಯ ಸದಸ್ಯರು, ಮುಖ್ಯಾಧಿಕಾರಿಗಳು ಹಾಗೂ ಕಚೇರಿಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಶ್ರೀ ಭಗವಾನ್ ಬುದ್ದರ 2570ನೇ ಜಯಂತ್ಯೋತ್ಸವ

ಧೈರ್ಯದ ದಾರಿ




**ಮಾನ್ವಿ:**ಪಟ್ಟಣದ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ತಾಲೂಕು ಆಡಳಿತ ವತಿಯಿಂದ ನಡೆದ ಶ್ರೀ ಭಗವಾನ್ ಬುದ್ದರ 2570ನೇ ಜಯಂತ್ಯೋತ್ಸವ ಕಾರ್ಯಕ್ರಮವನ್ನು ತಹಶೀಲ್ದಾರ್ ಭೀಮರಾಯ ಬಿ.ರಾಮಸಮುದ್ರ ರವರು ಶ್ರೀ ಬುದ್ದರ ಮೂರ್ತಿಗೆ ಪುಷ್ಪ ಸಮರ್ಪಿಸುವ ಮೂಲಕ ಶ್ರೀ ಭಗವಾನ್ ಬುದ್ದರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಈ ಭೂಮಿಯಲ್ಲಿ ಮಾನವನಾಗಿ ದೈವತ್ವವನ್ನು ಸಾರಿದವರು ಶ್ರೀ ಭಗವಾನ್ ಬುದ್ದರು ಅವರು ಸಾರಿದ ಅಹಿಂಸೆ ಹಾಗೂ ಶಾಂತಿಯ ಸಂದೇಶಗಳು ಇಂದು ವಿಶ್ವದಲ್ಲಿನ ವಿವಿಧ ರಾಷ್ಟ್ರಗಳ ನಡುವೆ ನಡೆಯುತ್ತಿರುವ ಯುದ್ದದ ವಾತಾವರಣಕ್ಕೆ ಸೂಕ್ತವಾದ ಸಂದೇಶವನ್ನು ನೀಡುತ್ತಿವೇ. ಡಾ.ಬಿ.ಆರ್.ಅಂಬೇಡ್ಕರ್ ರವರು ಶ್ರೀ ಭಗವಾನ್ ಬುದ್ದರು ಸ್ಥಾಪಿಸಿದ ಬೌದ ಧರ್ಮದಲ್ಲಿನ ಸಮಾನತೆಯ ತತ್ವಗಳಿಂದ ಆರ್ಕರ್ಷಿತರಾಗಿ ಬೌದ ಧರ್ಮವನ್ನು ಒಪ್ಪಿಕೊಂಡು ಸ್ವಿಕಾರ ಮಾಡಿದರು.ಇಂದು ಬುದ್ದರ ಸಂದೇಶಗಳನ್ನು ಮನೆ ಮನೆಗೆ ತಲುಪಿಸುವ ಕಾರ್ಯವನ್ನು ನಾವೆಲ್ಲರು ಮಾಡಬೇಕಾಗಿದೆ ಎಂದು ತಿಳಿಸಿದರು.

ಮಾಜಿ ಎ.ಪಿ.ಎಂ.ಸಿ ಸದಸ್ಯರಾದ ಶಿವರಾಜ ನಾಯಕ ಮಾತನಾಡಿ ಸತ್ಯ ಮತ್ತು ಆಹಿಸೆಯನ್ನುಒಳಗೊಂಡ ಪಂಚಶೀಲ ತತ್ವಗಳನ್ನು ಗೌತಮ್ಮ ಬುದ್ದರು ನಮ್ಮಗೆ ಭೋದಿಸಿದ್ದಾರೆ. ಅವುಗಳನ್ನು ನಾವು ನಿತ್ಯ ನಮ್ಮ ಜೀವನದಲ್ಲಿ ಅಳವಡಿಸಿಕೊಳಬೇಕಾಗಿದೆ ಶಾಂತಿ ಮತ್ತು ಅಹಿಂಸೆಯಿಂದ ಮಾತ್ರ ನಾವು ಜಗತ್ತನ್ನು ಗೇಲವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಶಿಕ್ಷಕಿ ಆಶ್ವಿನಿ ಸಂಗಮೇಶ ರವರು ಗೌತಮ್ಮ ಬುದ್ದನ ಜೀವನ ಮತ್ತು ಸಂದೇಶಗಳ ಕುರಿತು ವಿಶೇಷವಾದ ಉಪನ್ಯಾಸವನ್ನು ನೀಡಿದರು. ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಉತ್ತಮ ಸಾಧನೆಯನ್ನು ತೋರಿದ ಸಾಧಕರನ್ನು ತಾಲೂಕು ಆಡಳಿತವತಿಯಿಂದ ಗೌರವಿಸಿ ಸನ್ಮಾನಿಸಲಾಯಿತು. 2 ನೇಪುಟಕ್ಕೆ

## ಗಡಿ ಭಾಗದ ಕನ್ನಡ ಶಾಲೆಗಳಲ್ಲಿ ಮೂಲಸೌಲಭ್ಯಗಳನ್ನು ಕಲ್ಪಿಸಲಾಗುವುದು: ಸೋಮಣ್ಣ ಬೇವಿನಮರದ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಸಿದ್ದಲಿಂಗಪ್ಪ ವಕೀಲರ ನಿವಾಸಕ್ಕೆ ಆಗಮಿಸಿದ ರಾಜ್ಯ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಸೋಮಣ್ಣ ಬೇವಿನಮರದ ವೀರಶೈವ ಲಿಂಗಾಯತ ಸಮಾಜದವರಿಂದ ಸನ್ಮಾನ ಸ್ವೀಕರಿಸಿ ಮಾತನಾಡಿ ರಾಜ್ಯ ಸರ್ಕಾರವು 1910 ರಲ್ಲಿ ಗಡಿನಾಡ ಕನ್ನಡಿಗರ ಅಭಿವೃದ್ದಿಗಾಗಿ ಗಡಿ ಪ್ರದೇಶ ಅಭಿವೃದ್ದಿ ಪ್ರಾಧಿಕಾರವನ್ನು ರಚಿಸಿ ಕನ್ನಡ ಭಾಷಿಕರಿಗೆ ಅಗತ್ಯ ಮೂಲ ಸೌಕರ್ಯ, ಕನ್ನಡ ಶಾಲೆಗಳಲ್ಲಿ ಮೂಲಸೌಲಭ್ಯಗಳನ್ನು ನೀಡುವುದರ ಜೋತೆಗೆ ಕನ್ನಡ ಭಾಷಿಕರಿಗಾಗಿ ಕನ್ನಡ ಭವನಗಳನ್ನು ಕೂಡ ನಿರ್ಮಾಣ ಮಾಡಲಾಗಿದೆ ರಾಜ್ಯದ ಗಡಿಯನ್ನು ಹಂಚಿಕೊಂಡಿರುವ 6 ರಾಜ್ಯಗಳಲ್ಲಿನ 19 ಜಿಲ್ಲೆಯ 63 ತಾಲೂಕುಗಳಲ್ಲಿ ಮಾನಸಿಕವಾಗಿ ಕನ್ನಡಿಗರಿದ್ದು ಅವರಿಗೆ ಅಗತ್ಯವಾದ ಎಲ್ಲಾ ಮೂಲಸೌಲಭ್ಯಗಳನ್ನು ಗಡಿ ಪ್ರದೇಶ ಅಭಿವೃದ್ದಿ ಪ್ರಾಧಿಕಾರವು ಕಲ್ಪಿಸುತ್ತಿದೆ. ಗಡಿಯಲ್ಲಿರುವ ಸರಕಾರಿ, ಅನುದಾನಿತ ಕನ್ನಡ ಶಾಲೆಗಳಿಗೆ ಅಗತ್ಯವಿರುವ ಪುಸ್ತಕಗಳು,ಶುದ್ದ ಕುಡಿಯುವ ನೀರಿನ ಘಟಕ, ಮೈದಾನ,ಕಾಂಪೋಡ್,ಕೋಠಡಿಗಳು,ಗ್ರಂಥಲಾಯ,ಪಿಠೋಪಕರಣ ಹಾಗೂ ಕನ್ನಡ ಭಾವನಗಳ ನಿರ್ಮಾಣಕ್ಕೆ ಅಗತ್ಯ ಅನುದಾನವನ್ನು ನೀಡಲಾಗುತ್ತಿದೆ.

ಕೇರಳದಲ್ಲಿನ ಕಾಸರಗೋಡು ಹಾಗೂ ಮಹಾರಾಷ್ಟ್ರದಲ್ಲಿನ ಅಕ್ಕಲಕೋಟೆಯಲ್ಲಿ ಲಿಗಾಡೆ ತಾಯಿಯವರ ಹೆಸರಿನಲ್ಲಿ ಕನ್ನಡ ಭವನ ನಿರ್ಮಾಣ ಪೂರ್ಣಗೊಂಡಿದ್ದು ಎರಡು ರಾಜ್ಯದ ಮುಖ್ಯಮಂತ್ರಿಗಳಿಂದ ಕನ್ನಡಭವನವನ್ನು ಉದ್ಘಾಟಿಸಲಾಗುವುದು.

ಗೋವದಲ್ಲಿ 4.5 ಲಕ್ಷ ಕನ್ನಡಿಗರು ವಾಸವಾಗಿದ್ದಾರೆ ಅವರಿಗಾಗಿ ಕನ್ನಡ ಭವನ ನಿರ್ಮಾಣಕ್ಕಾಗಿ ನಿವೇಶನವನ್ನು ಖರೀದಿ ಮಾಡಲಾಗಿದು ಕನ್ನಡ ಭಾವನ ನಿರ್ಮಾಣಕ್ಕೆ ಚಾಲನೆ ನೀಡಲಾಗುವುದು. ಗಡಿಭಾಗದಲ್ಲಿನ ಕನ್ನಡ ನಿವಾಸಿಗಳ ಜಾತಿಯನ್ನು ರಾಜ್ಯದಲ್ಲಿಯು ಕೂಡ ಅದೆ ಜಾತಿಯನ್ನು ಪರಿಗಣಿಸಬೇಕು ಎಂದು ಮುಖ್ಯ ಕಾರ್ಯದರ್ಶಿಯವರೊಂದಿಗೆ ಚರ್ಚೆ ನಡೆಸಲಾಗಿದೆ.

ಮಹಾರಾಷ್ಟ್ರದಲ್ಲಿ ಕನ್ನಡ ಶಾಲೆಗಗಳಿಗೆ ಮರಾಠ ಶಿಕ್ಷಕರನ್ನು ನೇಮಕ ಮಾಡುತ್ತಿರುವುದನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದು 108 ಶಿಕ್ಷಕರನ್ನು ನೇಮಕಮಾಡುವುದಕ್ಕೆ ಕ್ರಮ ಕೈಗೊಳ್ಳಲಾಗಿದೆ. ಬಿದ್ದರ್ ಹಾಗೂ ರಾಯಚೂರು ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಗಡಿ ಭಾಗದಲ್ಲಿ ಕನ್ನಡ ಉತ್ಸವ ಕಾರ್ಯಕ್ರಮ ನಡೆಸುವುದಕ್ಕೆ 5 ಲಕ್ಷ ಅನಮುದಾನವನ್ನು ನೀಡಲಾಗಿದು ಅಗತ್ಯ ಬಿದ್ದಲ್ಲಿ ಇನ್ನೂ 5 ಲಕ್ಷ ಅನುದಾನ ನೀಡಲಾಗುವುದು. ಬಾಂಬೆ ಹಾಗೂ ಔರಾಂಗಬಾದ್ ನಲ್ಲಿ 200 ಕ್ಕೂ ಹೆಚ್ಚು ಕನ್ನಡ ಶಾಲೆಗಳಿವೆ. ಆಂಧ್ರ ಪ್ರದೇಶದಲ್ಲಿನ ಶ್ರೀಶೈಲದಲ್ಲಿ ಕನ್ನಡಿಗರಿಗಾಗಿ ಕನ್ನಡ ಭವನ ನಿರ್ಮಾಣ ಮಾಡಲಾಗಿದೆ. ಹೊರದೇಶಗಳಲ್ಲಿನ ಹೊರನಾಡು ಕನ್ನಡಿಗರಿಗೂ ಕೂಡ ಅಗತ್ಯ ಕಾರ್ಯಕ್ರಮಗಳ ಅಯೋಜನೆ ಮಾಡಲಾಗುತ್ತಿದೆ ಬೇರೆ ಬೇರೆ ರಾಜ್ಯಗಳಲ್ಲಿರುವ ಕನ್ನಡಿಗರ ಹಿತವನ್ನು ಕಾಯುವುದಕ್ಕಾಗಿ ಗಡಿ ಪ್ರದೇಶ ಅಭಿವೃದ್ದಿ ಪ್ರಾಧಿಕಾರ ಅಗತ್ಯ ಕ್ರಮ ಕೈಗೊಳ್ಳುತ್ತಿದೆ ಎಂದು ತಿಳಿಸಿದರು.

ವೀರಶೈವ ಲಿಂಗಾಯತ ಸಮಾಜದ ವತಿಯಿಂದ ರಾಜ್ಯ ಗಡಿ ಪ್ರದೇಶ ಅಭಿವೃದ್ದಿ ಪ್ರಾಧಿಕಾರದ ಅಧ್ಯಕ್ಷರಾದ ಸೋಮಣ್ಣ ಬೇವಿನಮರದ ರವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಗಡಿ ಪ್ರದೇಶ ಅಭಿವೃದ್ದಿ ಪ್ರಾಧಿಕಾರದ ಸದಸ್ಯರಾದ ಭಗತ್ ರಾಜ್ ಹಾಗೂ ಶಿವರೆಡ್ಡಿ ನವಲಿ ಮಾತನಾಡಿದರು.

ಮಾಜಿ ಶಾಸಕ ಬಸವನಗೌಡ ಬ್ಯಾಗವಾಟ, ಸಿದ್ದಲಿಂಗಪ್ಪ ವಕೀಲರು,ಹರಿಹಾರಪಾಟೀಲ್,ಸೇರಿದಂತೆ ವೀರಶೈವ ಲಿಂಗಾಯತ ಸಮಾಜದ ಮುಖಂಡರು ಭಾಗವಹಿಸಿದರು.

## ರಾಯಚೂರಿನಲ್ಲಿ ವೈಶಾಖ ಬುದ್ಧ ಪೂರ್ಣಿಮಾ ಹಾಗೂ ವಿಶ್ವ ಕಾರ್ಮಿಕರ ದಿನಾಚರಣೆ

ಧೈರ್ಯದ ದಾರಿ



**ರಾಯಚೂರು, ಮೇ 1:** ವೈಶಾಖ ಬುದ್ಧ ಪೂರ್ಣಿಮಾ ಹಾಗೂ ವಿಶ್ವ ಕಾರ್ಮಿಕರ ದಿನಾಚರಣೆಯ ಅಂಗವಾಗಿ ನಗರದ ಮನೋರಂಜನಾ ಕೇಂದ್ರದಲ್ಲಿ ಶುಕ್ರವಾರ ಕಾರ್ಮಿಕರ ಹಕ್ಕುಗಳ ವೇದಿಕೆ ಸಂಘಟನೆಯ ವತಿಯಿಂದ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಲಾಯಿತು. ಕಾರ್ಯಕ್ರಮವನ್ನು ಸನ್ಮಾನ್ಯ ಶ್ರೀ ಎಸ್. ಮಾರೆಪ್ಪ ಅವರು ಉದ್ಘಾಟಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶ್ರೀ ಹೇಮರಾಜ್ ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಮಾನ್ಯ ಶ್ರೀ ಶ್ರೀನಿವಾಸ್ ಕಲ್ವಲದೊಡ್ಡಿ, ಸಮಿತಿಯ ಜಿಲ್ಲಾಧ್ಯಕ್ಷರಾದ ಶ್ರೀಕಾಂತ್ ಯರ್ಮರ್ಸ್, ತಾಲೂಕ ಅಧ್ಯಕ್ಷರಾದ ತಾಯಣ್ಣ ಗಧಾರ ಸೇರಿದಂತೆ ಹಲವರು ಆಗಮಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ನರಸಿಂಹಲು ಮರ್ಚೆಟಾಳ್, ಪ್ರಭು ಮರ್ಚೆಟಿ ಹಾಳ್, ಲಕ್ಷ್ಮಣ ಕಲ್ಲೂರ್, ಆಂಜನೇಯ ಗಾರಲ್ದಿನ್ನಿ, ರವೀಂದ್ರ ಗಾರಲದಿನ್ನಿ, ಆಂಜನೇಯ ಮಾಸಳ್ಳಿ, ಕಲ್ಲೂರ್ ನರಸಿಂಹ (ಶಿಕ್ಷಕರು, ರಾಂಪುರ್) ಹಾಗೂ ಇತರ ಗಣ್ಯರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಕಾರ್ಮಿಕರ ಹಕ್ಕುಗಳ ಕುರಿತು ಜಾಗೃತಿ ಮೂಡಿಸುವ ಮಾತುಗಳು ನಡೆದವು.

## ಕಾರ್ಮಿಕರ ಹಕ್ಕುಗಳ ರಕ್ಷಣೆಗೆ ಒಗ್ಗಟ್ಟಿನ ಹೋರಾಟ ಅಗತ್ಯ ಕೆ. ನಾಗಲಿಂಗಸ್ವಾಮಿ ಕರೆ

ಧೈರ್ಯದ ದಾರಿ

ಮಾನ್ವಿ ಉಪ ವಿಭಾಗದಲ್ಲಿ ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘ (ಎಐಸಿಸಿಟಿಯು) ವತಿಯಿಂದ ವಿಶ್ವ ಕಾರ್ಮಿಕ ದಿನಾಚರಣೆಯನ್ನು ಅರ್ಥ ಪೂರ್ಣವಾಗಿ ಆಚರಣೆ ಮಾಡಲಾಯಿತು.




ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಕೇಂದ್ರ ಸಮಿತಿ ಅಧ್ಯಕ್ಷ ಕೆ. ನಾಗಲಿಂಗಸ್ವಾಮಿ ಅವರು, ವಿಶ್ವ ಕಾರ್ಮಿಕ ದಿನದ ಇತಿಹಾಸ ಮತ್ತು ಅದರ ಮಹತ್ವವನ್ನು ವಿವರಿಸಿದರು. ವಿಶ್ವದ ಕಾರ್ಮಿಕ ವರ್ಗ ತನ್ನ ಹಕ್ಕುಗಳಿಗಾಗಿ ನಡೆಸಿದ ಐತಿಹಾಸಿಕ ಹೋರಾಟಗಳ ಫಲವಾಗಿ ಇಂದು ಕಾರ್ಮಿಕರಿಗೆ ಎಂಟು ಗಂಟೆಗಳ ಕೆಲಸದ ಅವಧಿ ಸೇರಿದಂತೆ ಹಲವು ಹಕ್ಕುಗಳು ದೊರೆತಿವೆ ಎಂದು ಹೇಳಿದರು. 2ನೇಪುಟಕ್ಕೆ►

ಮೊದಲನೇ ಪುಟದಿಂದ

## ಶ್ರೀ ಭಗವಾನ್ ಬುದ್ಧರ 2570ನೇ ಜಯಂತ್ಯೋತ್ಸವ

ಕಾರ್ಯಕ್ರಮದಲ್ಲಿ ಗ್ರೇಡ್-2 ತಹಶೀಲ್ದಾರ್ ಅಬ್ದುಲ್ ವಾಹಿದ್, ಪಿ.ಐ. ಸೋಮಶೇಖರ ಎಸ್.ಕೆಂಚರೆಡ್ಡಿ, ಕೃಷಿ ಅಧಿಕಾರಿ ಗುರುನಾಥ ಭೂಸನೂರ್ ಮಠ ಸೇರಿದಂತೆ ಮುಖಂಡರಾದ ಪಿ.ತಿಪ್ಪಣ್ಣ ಬಾಗಲವಾಡ, ಲಕ್ಷ್ಮಣ ಜಾನೇಕಲ್,ಹನುಮೇಶ ಸೀಕಲ್,ಶಿವರಾಜ ಉಮಳಿಹೊಸೂರು,ದತ್ತಾತ್ರೇಯ ವಕೀಲರು, ಜಿ.ಹನುಮೇಶ ಉದ್ಭಳ್.ಶಿವು ಡೋಣಮರಡಿ, ಮಲ್ಲಿಕಾರ್ಜುನ ಜಾನೆಕಲ್, ರಾಮುಹೋಳೆಯಪ್ಪ , ಸಂಜೀವಪ್ಪ ಸೇರಿದಂತೆ ಇನ್ನಿತರರು ಇದ್ದರು.

## ಕಾರ್ಮಿಕರ ಹಕ್ಕುಗಳ ರಕ್ಷಣೆಗೆ ಒಗ್ಗಟ್ಟಿನ ಹೋರಾಟ ಅಗತ್ಯ ಕೆ. ನಾಗಲಿಂಗಸ್ವಾಮಿ ಕರೆ

ತುಂಗಭದ್ರಾ ನೀರಾವರಿ ಕಾರ್ಮಿಕರು ಇಂದಿಗೂ ಕಡಿಮೆ ವೇತನ, ಕಾರ್ಮಿಕರ ಕೊರತೆ, ಕಾರ್ಮಿಕ ಕಾಯ್ದೆಗಳ ಉಲ್ಲಂಘನೆ ಹಾಗೂ ಬಾಕಿ ವೇತನದಂತಹ ಅನೇಕ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ ಎಂದು ಅವರು ಆತಂಕ ವ್ಯಕ್ತಪಡಿಸಿದರು. ಕಾರ್ಮಿಕರು ಒಗ್ಗಟ್ಟಿನಿಂದ ಸಂಘಟಿತರಾಗಿ ತಮ್ಮ ಹಕ್ಕುಗಳಿಗಾಗಿ ಹೋರಾಟವನ್ನು ಮುಂದುವರಿಸಬೇಕೆಂದು ಕರೆ ನೀಡಿದರು. ಸರ್ಕಾರ ಹಾಗೂ ಸಂಬಂಧಿತ ಅಧಿಕಾರಿಗಳು ಕಾರ್ಮಿಕರ ಸಮಸ್ಯೆಗಳನ್ನು ತಕ್ಷಣ ಪರಿಹರಿಸಿ, ಕಾರ್ಮಿಕ ಕಾಯ್ದೆಗಳ ಅನ್ವಯ ಸೌಲಭ್ಯಗಳನ್ನು ಒದಗಿಸಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘದ ಸಿರಿವಾರ ವಿಭಾಗದ ಅಧ್ಯಕ್ಷರಾದ ರಾಜಸಾಬ್ ಮಲ್ಲಟ, ಸಿರಿವಾರ ಉಪ ವಿಭಾಗದ ಅಧ್ಯಕ್ಷರಾದ ಈಶಪ್ಪ ಗೌಡ, ಕೇಂದ್ರ ಸಮಿತಿ ಖಜಾಂಚಿ ಜಲೀಲ್ ಪಾಷ, ಗೋಪಾಲ್ ರಾವ್, ಶಿವಣ್ಣ, ನಾಗರಾಜ್, ಕುರುಡಿಗೌಸ್, ಭಾಷಾ, ಸೈಯದ್, ಪ್ರವೀಣ್, ಹುಸೇನ್ ಖಾನ್ ಸೇರಿದಂತೆ ಉಪ ವಿಭಾಗದ ಅನೇಕ ಕಾರ್ಮಿಕರು ಭಾಗವಹಿಸಿದ್ದರು.

## ಬಾಬು ಜಗಜೀವನ ರಾಮ್ ಅವರ 119ನೇ ಜಯಂತೋತ್ಸವ



**ಪಿರಿಯಾಪಟ್ಟಣ.ಮೇ.01:** ಸಂವಿಧಾನ ಶಿಲ್ಪಿ ಡಾ. ಬಿಆರ್ ಅಂಬೇಡ್ಕರ್ ಮತ್ತು ಹಸಿರು ಕ್ರಾಂತಿಯ ಹರಿಕಾರ ಡಾಕ್ಟರ್ ಬಾಬು ಜಗಜೀವನ ರಾಮ್ ಇವರಿಬ್ಬರು ಮಹನೀಯರು ಎರಡು ಕಣ್ಣುಗಳಂತೆ ಬೇರೆ ಮಾಡಲು ಯಾರಿಂದಲೂ ಸಾಧ್ಯವಿಲ್ಲ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಸಚಿವರಾದ ಕೆ ಎಚ್ ಮುನಿಯಪ್ಪ ತಿಳಿಸಿದರು.

ತಾಲೂಕಿನ ಬಿಎಮ್ ರಸ್ತೆಯ ಶಿಕ್ಷಕರ ಸಭಾಂಗಣದ ಸಮೀಪ ಕರ್ನಾಟಕ ಮಾದರ ಮಹಾಸಭಾ.ರಿ. ಮತ್ತು ಆದಿ ಜಾಂಬವ ಮಾದಿಗ ಸಂಘಟನೆಗಳ ಒಕ್ಕೂಟ ಪಿರಿಯಾಪಟ್ಟಣ ತಾಲೂಕು ಇವರ ವತಿಯಿಂದ ಡಾಕ್ಟರ್ ಬಾಬು ಜಗಜೀವನ ರಾಮ್ ಅವರ 119ನೇ ಜಯಂತೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಇಬ್ಬರು ನಾಯಕರು ಒಂದು ವರ್ಗಕೆ ಸೇರಿದವರಲ್ಲ ಅಂಬೇಡ್ಕರ್ ಅವರು ಈ ದೇಶಕ್ಕೆ ಶ್ರೇಷ್ಠವಾದ ಸಂವಿಧಾನವನ್ನು ಮತ್ತು ಕಾನೂನಿನ ಮೂಲಕ ಎಲ್ಲರಿಗೂ ಸಮಾನವಾಗಿ ಹಕ್ಕು ನೀಡುವಂತೆ ಮಾಡಿದ ಮಹಾನ್ ವ್ಯಕ್ತಿ. ಅದೇ ರೀತಿ ಬಾಬು ಜಗಜೀವನ್ ರಾಮ್ ಅವರು ಈ ದೇಶಕ್ಕೆ ಅನ್ನ ನೀಡಿದ ಗಣ್ಯ ವ್ಯಕ್ತಿ ಇವರನ್ನು ಹಸಿರು ಕ್ರಾಂತಿಯ ಹರಿಕಾರ ಎಂದು ಕರೆಯುತ್ತಾರೆ ಬಾಬುಜಿ ಅವರು ಈ ಹಿಂದೆ ಉಪ ಪ್ರಧಾನಿಯಾಗಿ ರೈಲ್ವೆ ಕೃಷಿ ಹಾಗೂ ಇತರ ಸಚಿವರಾಗಿ ಕಾರ್ಯನಿರ್ವಹಿಸಿದ್ದಾರೆ ಶೋಷಿತರ ಪರವಾಗಿ ಅನೇಕ ಹೋರಾಟಗಳನ್ನು ಮಾಡಿದ್ದಾರೆ ಇತ್ತೀಚಿನ ದಿನಗಳಲ್ಲಿ ಒಳ ಮೀಸಲಾತಿ ಗೊಂದಲಗಳು ಮಾರ್ಪಟ್ಟಿಗಿದವು ಇದನ್ನು ಎಡ ಬಲ ಎನದೆ ಎಲ್ಲಾ ಸಚಿವರ ಸಮ್ಮುಖದಲ್ಲಿ ಎ ಬಿ ಸಿ ಎಂದು ವರ್ಗಾಯಿಸಿ ಎಲ್ಲರಿಗೂ ಸಮಾನವಾಗಿ ಹಂಚಿಕೆ ಮಾಡಿ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನ ಮಾಡಿ ಎಲ್ಲರಿಗೂ ಸಮಾನವಾಗಿ ಹಂಚಿಕೆ ಮಾಡಲಾಗಿದೆ ಇದಕ್ಕೆ ಯಾರು ಗೊಂದಲ ಸೃಷ್ಟಿ ಮಾಡಿಕೊಳ್ಳದೆ ಎಲ್ಲರೂ ಒಗ್ಗಟ್ಟಾಗಿ ಇರಬೇಕು ಎಂದು ಕರೆಕೊಟ್ಟರು.

ಪಶುಸಂಗೋಪನೆ ಮತ್ತು ರೇಷ್ಮೆ ಖಾತೆ ಸಚಿವ ಕೆ ವೆಂಕಟೇಶ್ ಮಾತನಾಡಿ ಬಾಬು ಜಗಜೀವ ರಾಮ್ ಅವರು ಈ ದೇಶದ ಆರ್ಥಿಕತೆ ಬಗ್ಗೆ ಹೆಚ್ಚು ಕಾಳಜಿ ವಹಿಸಿದರು ಜನರ ಪರವಾಗಿ ಬಡವರಿಗೆ ಬದುಕು ಕೊಟ್ಟ ಒಬ್ಬ ಅಗ್ರಗಣ್ಯ ವ್ಯಕ್ತಿ ಇವರು ಹಸಿರು ಕ್ರಾಂತಿಯಾಗಿ ನಾಡಿಗೆ ದೇಶಕ್ಕೆ ಅನ್ನ ನೀಡಿದ ಮೂಲಕ ರೈತರ ಬಾಳಲ್ಲಿ ಹಸನು ಮಾಡಿದ ವ್ಯಕ್ತಿಯಾಗಿದ್ದಾರೆ ಅದೇ ರೀತಿ ದೇಶದ ಉಪ ಪ್ರಧಾನಿಯಾಗಿ ಕಾರ್ಯನಿರ್ವಹಿಸಿದರು ಅದರಂತೆ ನಮ್ಮ ಸರ್ಕಾರದ ಎಲ್ಲಾ ಗ್ಯಾರಂಟಿಗಳು ಜನರಿಗೆ ತಲುಪುವಂತೆ ಮಾಡಲಾಗಿದೆ ಮತ್ತು ಎಚ್ ಕೆ ಮುನಿಯಪ್ಪನವರ ಹಾಗೂ ವ್ಯಕ್ತಿ ಮಹದೇವಪ್ಪ ಹಾಗೂ ಇನ್ನಿತರ ಎಲ್ಲಾ ಎಡಬಲ ಸಚಿವರು ಮತ್ತು ಲಂಬಾಣಿ ಮತ್ತು ಭೋವಿ ಸಮಾಜದ ಎಲ್ಲಾ ಸಚಿವರ ಮತ್ತು ಮುಖ್ಯಮಂತ್ರಿ ಉಪಮುಖ್ಯಮಂತ್ರಿ ರಾಜ್ಯದ ಎಲ್ಲಾ ಸಚಿವರ ಜೊತೆಗೂಡಿ ಗೊಂದಲಕ್ಕೆ ತೆರೆ ಎಳೆದು ಸರಿಸಮನಾಗಿ ಹಂಚಿಕೆ ಮಾಡಲಾಗಿದೆ ಅದರಿಂದ ಯಾರೂ ಬೇರೆ ವಿರೋಧ ಪಕ್ಷದ ಮಾತಿಗೆ ಕಿವಿ ಕೊಡದೆ ಅಣ್ಣ-ತಮ್ಮಂದಿರ ಹಾಗೆ ಒಗ್ಗಟ್ಟಿನಿಂದ ಇರಬೇಕು ಎಂದರು.

ಕಾರ್ಯಕ್ರಮಕ್ಕೂ ಮೊದಲು ಪಟ್ಟಣದ ಶ್ರೀ ಮಸಣಿಕಮ್ಮ ದೇವಸ್ಥಾನಕ್ಕೆ ಪೂಜೆ ಸಲ್ಲಿಸಿ ಬೆಳ್ಳಿರಥ ಮತ್ತು ಕಲಾ ತಂಡಗಳೊಂದಿಗೆ ಬಾಬು ಜಗಜೀವನ್ ರಾಮ್ ಅವರ ಭಾವಚಿತ್ರವುಳ್ಳ ಬೆಳ್ಳಿ ರಥದಲ್ಲಿ ಬಿ ಎಂ ರಸ್ತೆ ಮೂಲಕ ಮೆರವಣಿಗೆ ಮಾಡಲಾಯಿತು. ಈ ಸಂದರ್ಭ ವಿಧಾನಪರಿಷತ್ ಸದಸ್ಯ ಡಾಕ್ಟರ್ ಡಿ ತಿಮ್ಮಯ್ಯ, ಕೆಪಿಸಿಸಿ ವಕ್ತಾರ ಎಂ ಲಕ್ಷ್ಮಣ್, ಕಾಂಗ್ರೆಸ್ ಜಿಲ್ಲಾ ಗ್ರಾಮಾಂತರ ಅಧ್ಯಕ್ಷ ಡಾಕ್ಟರ್ ಬಿ ಜೆ ವಿಜಯ್ ಕುಮಾರ್, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್, ಸಾಹಿತಿ ಕೆ ಆರ್ ರಾಚಯ್ಯ, ಮೈಸೂರು ಪೇಂಟ್ ಮತ್ತು ವಾಷಿಂಗ್ ಅಧ್ಯಕ್ಷ ಹೆಚ್ ಡಿ ಗಣೇಶ, ಮೈಸೂರು ಮಾಜಿ ಮೇಯರ್ ನಾರಾಯಣ, ಎಡತೊರೆ ಎಂ ನಿಂಗರಾಜ್, ಕೆಪಿಸಿಸಿ ಸದಸ್ಯ ಎಚ್ ಟಿ ಅನಿಲ್, ಮಾಜಿ ಎಂಎಲ್ಸಿ ಸಿ ರಮೇಶ್, ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ರೆಹೆಮಾನ್ ಜನ ಬಾಬು, ಕರ್ನಾಟಕ ಮಾದರ ಮಹಾಸಭಾ ಮತ್ತು ಆದಿ ಜಾಂಬವ ಮಾದಿಗ ಸಂಘಟನೆಗಳ ಮುಖ್ಯಸ್ಥರಾದ ಹಿಟ್ನೆ ಹೆಬ್ಬಾಗಿಲು ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷರಾದ ಶಿಗೂರು ವಿಜಯ್ ಕುಮಾರ್, ಭೂತನಹಳ್ಳಿ ಶಿವಣ್ಣ, ಡಿ ಕುಮಾರ್,ಆದಿಶೇಷ, ಸಣ್ಣಪ್ಪ, ಆನಂದ, ಆರ್ ಡಿ ಚಂದ್ರು, ರವಿಕುಮಾರ್, ನರಸಿಂಹ, ಬಸವರಾಜು, ಕುಮಾರ್, ನಾರಾಯಣ, ಹರೀಶ್, ಮಹೇಶ್, ರಾಜೇಂದ್ರ, ಜಯ ಸ್ವಾಮಿ, ಲೋಕೇಶ್ ಹೊನ್ನೇನಹಳ್ಳಿ, ಎಸ್ ಮಹದೇವ್, ಜಯಣ್ಣ, ಅಂಬಾರಿ ರವಿ, ಸೌರಭ, ಮಂಜು, ನಾಗೇಂದ್ರ, ಸೋಮಪ್ಪ, ಶಿವ, ಬೂತನಹಳ್ಳಿ ರವಿ, ಉದಯ್, ಗಿರೀಶ್, ವಿಜಯ್ ಕುಮಾರ್,ರಾಮಚಂದ್ರ, ನಂಜುಂಡಸ್ವಾಮಿ, ಅನಿಲ್ ಕುಮಾರ್, ಲೋಕೇಶ್, ಎಲ್ಲಾ ಇಲಾಖೆ ಅಧಿಕಾರಿಗಳು ಮತ್ತು ಇತರರು ಹಾಜರಿದ್ದರು.

## ಮಟಕಾ:ಇಬ್ಬರ ಬಂಧನ

**ಕಲಬುರಗಿ,ಮೇ.1**–ನಗರದ ಜಿಡಿಎ ಬಡಾವಣೆಯ ಎಸ್ಐಸಿ ಆಫೀಸ್ ಹತ್ತಿರದ ಸಾರ್ವಜನಿಕ ರಸ್ತೆಯಲ್ಲಿ ಮತ್ತು ಆಳಂದ ಚೆಕ್‌ಪೋಸ್ಟ್ ಹತ್ತಿರದ ವೈಷ್ಣವಿ ಗುಡಿಗೆ ಹೋಗುವ ರಸ್ತೆಯಲ್ಲಿ ಮಟಕಾ ನಂಬರ್ ಬರೆದುಕೊಳ್ಳುತ್ತಿದ್ದ ಇಬ್ಬರನ್ನು ಪೊಲೀಸರು ಬಂಧಿಸಿದ್ದಾರೆ.ನಗರದ ಜಿಡಿಎ ಬಡಾವಣೆಯ ಎಸ್ಐಸಿ ಆಫೀಸ್ ಹತ್ತಿರದ ಸಾರ್ವಜನಿಕ ರಸ್ತೆಯಲ್ಲಿ ಮಟಕಾ ನಂಬರ್ ಬರೆದುಕೊಳ್ಳಲಾಗುತ್ತಿದೆ ಎಂಬ ಮಾಹಿತಿ ಮೇಲೆ ಅಶೋಕನಗರ ಪೊಲೀಸ್ ಠಾಣೆ ಮುಖ್ಯಪೇದೆ ಶಿವಪ್ರಕಾಶ, ಸಿಬ್ಬಂದಿಗಳಾದ ವೈಜನಾಥ, ನೀಲಕಂಠರಾಯ ಅವರು ದಾಳಿ ನಡೆಸಿ ಎಂಎಸ್‌ಕೆ ಮಿಲ್ ಫಾಟಕ್ ಏರಿಯಾ ನಿವಾಸಿ ಫರೀದ್ ತಂದೆ ಬಾಬು ಶೇಖ್ (26) ಎಂಬಾತನನ್ನು ಬಂಧಿಸಿ 1120 ರೂ.ನಗದು, ಮಟಕಾ ಚೀಟಿ ಮತ್ತು ಒಂದು ಬಾಲ್ ಪೆನ್ ಜಪ್ತಿ ಮಾಡಿದ್ದಾರೆ.ಆಳಂದ ಚೆಕ್‌ಪೋಸ್ಟ್ ಹತ್ತಿರದ ವೈಷ್ಣವಿ ಗುಡಿಗೆ ಹೋಗುವ ರಸ್ತೆಯಲ್ಲಿ ಮಟಕಾ ನಂಬರ್ ಬರೆದುಕೊಳ್ಳಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಬ್ ಅರ್ಬನ್ ಪೊಲೀಸ್ ಠಾಣೆ ಪಿಐ ನಟರಾಜ ಲಾಡೆ, ಸಿಬ್ಬಂದಿಗಳಾದ ಚಂದ್ರಕಾಂತ, ಗುಂಡೇರಾಯ ಅವರು ದಾಳಿ ನಡೆಸಿ ಕೆರೆಭೋಸ್ಗಾ ಗ್ರಾಮದ ಶರಣಪ್ಪ ಹರಳಯ್ಯ (36) ಎಂಬಾತನನ್ನು ಬಂಧಿಸಿ 1500 ರೂ.ನಗದು, ಮಟಕಾ ಚೀಟಿ ಮತ್ತು ಒಂದು ಬಾಲ್ ಪೆನ್ ಜಪ್ತಿ ಮಾಡಿದ್ದಾರೆ.
ಅಶೋಕನಗರ ಮತ್ತು ಸಬ್ ಅರ್ಬನ್ ಪೊಲೀಸ್ ಠಾಣೆಗಳಲ್ಲಿ ಪ್ರತ್ಯೇಕ ಪ್ರಕರಣ ದಾಖಲಾಗಿದೆ.



ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

## ಕುಡಿಯುವ ನೀರು ಪೂರೈಕೆಯಲ್ಲಿ ನಿರ್ಲಕ್ಷ್ಯವಾದರೆ ಕ್ರಮ: ಶಾಸಕ ಪ್ರಭು ಚವ್ಹಾಣ



**ಔರಾಧ:ಮೇ.1:** ಬೇಸಿಗೆಯ ರಣಬಿಸಿಲು ತೀವ್ರವಾಗಿ ಹೆಚ್ಚುತ್ತಿರುವ ಹಿನ್ನೆಲೆ ಕ್ಷೇತ್ರದ ಅನೇಕ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಗಂಭೀರ ರೂಪ ಪಡೆಯುತ್ತಿದೆ. ಇಂತಹ ಪರಿಸ್ಥಿತಿಯಲ್ಲಿ ನಿರ್ಲಕ್ಷ ವಹಿಸುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಎಚ್ಚರಿಸಿದರು.

ಔರಾದ(ಬಿ) ತಾಲ್ಲೂಕು ಪಂಚಾಯತ ಕಛೇರಿ ಸಭಾಂಗಣದಲ್ಲಿ ಏ.30 ರಂದು ನಡೆದ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಹಸೀಲ್ದಾರರು, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳು ಸಮನ್ವಯತೆಯಿಂದ ಕೆಲಸ ಮಾಡಿ ಕ್ಷೇತ್ರದ ಯಾವೊಂದು ಗ್ರಾಮದಲ್ಲಿಯೂ ನೀರಿನ ಕೊರತೆಯಾಗದಂತೆ ನೋಡಿಕೊಳ್ಳಬೇಕು ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

ನೀರಿನ ಸಮಸ್ಯೆ ಕಂಡುಬಂದ ಕೂಡಲೇ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಬೇಕು. ಕೆಟ್ಟಿರುವ ಬೋರ್‌ವೆಲ್‌ಗಳನ್ನು ತಕ್ಷಣ ದುರಸ್ತಿ ವಾಡಬೇಕು, ಅಗತ್ಯವಿದ್ದಲ್ಲಿ ಹೊಸ ಬೋರ್‌ವೆಲ್‌ಗಳನ್ನು ಕೊರೆಸಬೇಕು. ಪೈಪ್‌ಲೈನ್ ದುರಸ್ತಿ ಸೇರಿದಂತೆ ಎಲ್ಲಾ ಕಾಮಗಾರಿಗಳನ್ನು ಗಡುವಿನೊಳಗೆ ಪೂರ್ಣಗೊಳಿಸಬೇಕು. ವಿಳಂಬ ಅಥವಾ ನಿರ್ಲಕ್ಷ್ಯ ಕಂಡುಬಂದರೆ ಸಂಬಂಧಸಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಸಾಕಷ್ಟು ಬಿಸಲಿನ ಕಾರಣ ಪಶು ಪಕ್ಷಿಗಳಿಗೆ ನೀರಿನ ತೊಂದರೆಯಾಗುತ್ತಿದೆ. ಹಾಗಾಗಿ ಸಣ್ಣ ನೀರಾವರಿ ಇಲಾಖೆಯ ಕೆರೆಗಳಿಂದ ನಾಲಾಗಳಿಗೆ ನೀರು ಹರಿಸಿ ಅನುಕೂಲ ಮಾಡಿಕೊಡಬೇಕು. ಇನ್ನೊಂದು ತಿಂಗಳು ನೀರಿನ ಸಮಸ್ಯೆ ಹೆಚ್ಚಾಗಿ ಕಾಣಿಸುವುದರಿಂದ ಎಲ್ಲ ಅಧಿಕಾರಿಗಳು ಚುರುಕಿನಿಂದ ಕೆಲಸ ವಾಡಬೇಕು. ಜನ, ಜಾನುವಾರುಗಳಿಗೆ ನೀರಿನ ಕೊರತೆಯಾಗದಂತೆ ಎಚ್ಚರ ವಹಿಸಬೇಕು ಎಂದರು.

ಈ ವರ್ಷ ಎಸ್ಸೆಸ್ಸೆಲ್ಸಿ ಫಲಿತಾಂಶದಲ್ಲಿ ಸುಧಾರಣೆ ಕಾಣಿಸಿರುವುದಕ್ಕೆ ಸಂತೋಷವಾಗಿದೆ. ಆದರೆ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಕೊರತೆಯಿರುವುದನ್ನು ಕಂಡು ಬೇಸರವಾಗುತ್ತಿದೆ. ಎಲ್ಲ ಮುಖ್ಯಗುರುಗಳು ಮತ್ತು ಶಿಕ್ಷಕರು ಮನೆ-ಮನೆಗೆ ಭೇಟಿ ನೀಡಿ ಪೋಷಕರ ವುನವೊಲಿಸಬೇಕು. ಸರಿಯಾಗಿ ಪಾಠ ಮಾಡುತ್ತೇವೆಂದು ಭರವಸೆ ನೀಡಿ ದಾಖಲಾತಿ ಪ್ರಮಾಣವನ್ನು ಹೆಚ್ಚಿಸಬೇಕು. ಮುಂದಿನ ಪರೀಕ್ಷೆ ವೇಳೆಗೆ ಕನಿಷ್ಟ 5 ಸಾವಿರ ಮಕ್ಕಳು ಪರೀಕ್ಷೆ ಬರೆಯುವಂತಾಗಬೇಕು. ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಬೇಕಾದಷ್ಟು ಅನುದಾನ ನೀಡುತ್ತಿದ್ದೇನೆ. ಇನ್ನೂ ಅವಶ್ಯಕತೆಯಿದ್ದಲ್ಲಿ ಕೇಳಿ ಕೊಡುತ್ತೇನೆ. ಆದರೆ ಶಿಕ್ಷಣದ ವಿಷಯದಲ್ಲಿ ಕೊರತೆಯಾದರೆ ಸುಮ್ಮನೆ ಬಿಡುವುದಿಲ್ಲ ಎಂದು ಎಚ್ಚರಿಸಿದರು.

ಸರ್ಕಾರಿ ಶಾಲೆಗಳಿಗೆ ಕಳಪೆ ಆಹಾರ ಪೂರೈಕೆಯಾಗಿರುವುದು ಗ್ರಾಮ ಸಂಚಾರದ ಸಂದರ್ಭದಲ್ಲಿ ಪತ್ತೆಯಾಗಿದೆ. ಜಮಾಲಪೂರನಲ್ಲಿ ಕಳಪೆ ಮಟ್ಟದ ಆಹಾರ ಪದಾರ್ಥಗಳಿಂದ ಸಿದ್ದಪಡಿಸಿದ ಆಹಾರ ಸೇವಿಸಿ ಅನೇಕ ಮಕ್ಕಳು ಅನಾರೋಗ್ಯಕ್ಕೆ ಒಳಗಾಗಿದ್ದರು. ಇಂತಹ ಘಟನೆಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದರು.

ಸರ್ಕಾರಿ ಆಸ್ಪತ್ರೆಗಳಿಗೆ ಬೇಕಾದ ಎಲ್ಲ ಸೌಕರ್ಯಗಳನ್ನು ಒದಗಿಸುತ್ತಿದ್ದೇನೆ. ಎಕ್ಸರೇ, ಡಯಾಲಿಸಿಸ್ ಸೇರಿದಂತೆ ಎಲ್ಲ ಯಂತ್ರಗಳು ಸರಿಯಾಗಿ ಕೆಲಸ ಮಾಡುವಂತಾಗಬೇಕು. ಸಣ್ಣ-ಸಣ್ಣ ವಿಷಯಗಳಿಗೆ ಜಿಲ್ಲಾಸ್ಪತ್ರೆಗೆ ಶಿಫಾರಸ್ಸು ಮಾಡುವುದು ನಿಲ್ಲಬೇಕು. ಆಸ್ಪತ್ರೆಗೆ ಬರುವ ಎಲ್ಲ ರೋಗಿಗಳಿಗೆ ಸರಿಯಾಗಿ ಚಿಕಿತ್ಸೆ ಕಲ್ಪಿಸಬೇಕೆಂದು ತಾಲ್ಲೂಕು ಆರೋಗ್ಯಾಧಿಕಾರಿಗೆ ಸೂಚಿಸಿದರು.

ಅಧಿಕಾರಿಗಳು ಮತ್ತು ಗುತ್ತಿಗೆದಾರರಿಂದ ಲೂಟಿ: ಔರಾದ(ಬಿ) ವಿಧಾನಸಭಾ ಕ್ಷೇತ್ರದಲ್ಲಿ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಲು 250 ಕೋಟಿಗಿಂತ ಹೆಚ್ಚು ಅನುದಾನ ತಂದಿದ್ದೇನೆ. 276 ಕಾಮಗಾರಿಗಳ ಪೈಕಿ ಸುಮಾರು 50 ಕೆಲಸಗಳು ಸರಿಯಾಗಿ ಆಗಿವೆ. ಉಳಿದಂತೆ ಎಲ್ಲವೂ ಕಳಪೆಯಾಗಿವೆ. ಅಧಿಕಾರಿಗಳು ಮತ್ತು ಗುತ್ತಿಗೆದಾರರು ಸೇರಿಕೊಂಡು ಲೂಟಿ ಮಾಡಿದ್ದಾರೆ. ಹಣದ ಆಮೀಷವೊಡ್ಡಿ ಕಾಮಗಾರಿ ಕಳಪೆಯಾದರೂ ಹ್ಯಾಂಡೋವರ್ ಮಾಡಲಾಗಿದೆ. ಇದರ ಪರಿಣಾಮ ಜನತೆ ಸಮಸ್ಯೆ ಎದುರಿಸುತ್ತಿದ್ದಾರೆ. ಈ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರು, ಗ್ರಾಮೀಣಾಭಿವೃದ್ಧಿ ಸಚಿವರು, ಜಿಲ್ಲಾಧಿಕಾರಿಗಳು ಒಳಗೊಂಡು ಸಂಬಂಧಪಟ್ಟ ಎಲ್ಲರಿಗೂ ದೂರು ಸಲ್ಲಿಸಲಾಗಿದೆ. ಆದರೆ ಇಲ್ಲಿವರೆಗೆ ಯಾವ ಕ್ರಮವೂ ಆಗಿಲ್ಲವೆಂದು ಬೇಸರ ವ್ಯಕ್ತಪಡಿಸಿದರು.

ಸಭೆಯಲ್ಲಿ ಕೃಷಿ, ತೋಟಗಾರಿಕೆ, ಲೋಕೋಪಯೋಗಿ, ಪಂಚಾಯತ್ ರಾಜ್, ಪಶು ಸಂಗೋಪನೆ, ಕಂದಾಯ, ಅರಣ್ಯ, ಸಮಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ, ಜೆಸ್ಕಾಂ ಸೇರಿದಂತೆ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಲಾಯಿತು.

ತಾಲ್ಲೂಕು ಪಂಚಾಯತ ಆಡಳಿತಾಧಿಕಾರಿಯಾದ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರಾದ ಸೂರ್ಯಕಾಂತ ಬಿರಾದಾರ, ಔರಾದ(ಬಿ) ತಹಸೀಲ್ದಾರ ಮಹೇಶ ಪಾಟೀಲ, ಕಮಲನಗರ ತಹಸೀಲ್ದಾರ ಅಮಿತ ಕುಲಕರ್ಣಿ, ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಾದ ಕಿರಣ ಪಾಟೀಲ, ಹಣಮಂತರಾವ ಕೌಟಗೆ ಸೇರಿದಂತೆ ವಿವಿಧ ಇಲಾಖೆಗಳ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಆಳಂದದಲ್ಲಿ ವಿಡಿಯೋ ಸಂವಾದದ ಮೂಲಕ ಮಾಹಿತಿ: ಕಕ್ಷಿದಾರರಿಗೆ ಸುವರ್ಣಾವಕಾಶ

**ಆಳಂದ:ಮೇ.1:** ಬೆಂಗಳೂರುನಿಂದ ನಡೆದ ವಿಡಿಯೋ ಕಾನ್ಫರೆನ್ಸ್ ಮೂಲಕ "ಸಮಾಧಾನ ಸಮಾರಂಭ" ವಿಶೇಷ ಲೋಕ ಅದಾಲತ್ ಕುರಿತು ಮಾಹಿತಿ ಹಂಚಿಕೆಯಾಗಿದ್ದು, ಆಳಂದ ನ್ಯಾಯಾಲಯದಲ್ಲಿ ಸ್ಥಳೀಯ ಪತ್ರಕರ್ತರಿಗೆ ಗುರುವಾರ ವೀಕ್ಷಣೆಗೆ ಅವಕಾಶ ಕಲ್ಪಿಸಲಾಯಿತು.

ನ್ಯಾಯಾಧೀಶರಾದ ಕುಮಾರಿ ಸುಮನ್ ಚಿತರಗಿ ಅವರು ಪತ್ರಕರ್ತರಿಗೆ ಕಾರ್ಯಕ್ರಮದ ಮಹತ್ವವನ್ನು ವಿವರಿಸಿ, ಹೆಚ್ಚಿನ ಜನರಿಗೆ ಇದರ ಪ್ರಯೋಜನ ತಲುಪಿಸುವ ಅಗತ್ಯವಿದೆ ಎಂದು ತಿಳಿಸಿದರು.

ಭಾರತ ಸರ್ವೋಚ್ಚ ನ್ಯಾಯಾಲಯವು 21, 22 ಮತ್ತು 23 ಆಗಸ್ಟ್ 2026 ರಂದು ನವದೆಹಲಿಯಲ್ಲಿ "ಸಮಾಧಾನ ಸಮಾರಂಭ" ಎಂಬ ವಿಶೇಷ ಲೋಕ ಅದಾಲತ್ ಆಯೋಜಿಸುತ್ತಿದೆ. ಈ ವಿಶೇಷ ಲೋಕ ಅದಾಲತ್ ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳ ವೇಗವಾದ ಮತ್ತು ಸ್ನೇಹಪರ ಪರಿಹಾರಕ್ಕಾಗಿ ರೂಪಿಸಲಾಗಿದೆ. ರಾಜ್ಯದ ಎಲ್ಲಾ ನ್ಯಾಯಾಲಯಗಳಿಗೆ ಈ ಕುರಿತು ವಿಡಿಯೋ ಕಾನ್ಫರೆನ್ಸ್ ಮೂಲಕ ಮಾಹಿತಿ ನೀಡಲಾಗಿದ್ದು, ಅದರ ಭಾಗವಾಗಿ ಆಳಂದ ನ್ಯಾಯಾಲಯದಲ್ಲೂ ಕಾರ್ಯಕ್ರಮ ವೀಕ್ಷಣೆ ನಡೆದಿದೆ.ಕರ್ನಾಟಕ ಹೈಕೋರ್ಟ್ ನ್ಯಾಯಮೂರ್ತಿ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯನಿರ್ವಹಣಾ ಅಧ್ಯಕ್ಷರಾದ ನ್ಯಾಯಮೂರ್ತಿ ಅನು ಶಿವರಾವ್ ಅವರ ವಾರ್ಗದರ್ಶನ ಮತ್ತು ನ್ಯಾಯಮೂರ್ತಿ ಆರ್ ದೇವದಾಸ್ ಅವರ ಸೂಚನೆಯಂತೆ, ಈ ವಿಶೇಷ ಲೋಕ ಅದಾಲತ್ ಬಗ್ಗೆ ರಾಜ್ಯದಾದ್ಯಂತ ಜಾಗೃತಿ ಮೂಡಿಸಲು ಗುರುವಾಗ ಮಧ್ಯಾಹ್ನ ಕರ್ನಾಟಕ ಹೈಕೋರ್ಟನಲ್ಲಿ ಪ್ರೆಸ್ ಮೀಟ್ ಕೂಡ ನ್ಯಾಯಾಧೀಶರಿಗೆ ಮತ್ತು ಪತ್ರಕರ್ತರಿಗೆ ನೆರವೀಕ್ಷಣೆಗೆ ಅವಕಾಶ ಮಾಡಿಕೊಟ್ಟು ಇದರ ಉದ್ದೇಶದ ಕುರಿತಾಗಿ ಮಾಹಿತಿ ನೀಡಲಾಯಿತು.

ಉದ್ದೇಶ: ಈ "ಸಮಾಧಾನ ಸಮಾರೋಹ" ವಿಶೇಷ ಲೋಕ ಅದಾಲತ್‌ನ ಮುಖ್ಯ ಉದ್ದೇಶವೆಂದರೆ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ವೇಗವಾಗಿ, ಕಡಿಮೆ ವೆಚ್ಚದಲ್ಲಿ ಮತ್ತು ಪರಸ್ಪರ ಒಪ್ಪಂದದ ಮೂಲಕ ಇತ್ಯರ್ಥಗೊಳಿಸುವುದು.



ಕಕ್ಷಿದಾರರು ದೀರ್ಘಕಾಲದ ನ್ಯಾಯಾಂಗ ಪ್ರಕ್ರಿಯೆಯಿಂದ ಹೊರಬಂದು ಸುಲಭವಾಗಿ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಲು ಇದು ಉತ್ತಮ ವೇದಿಕೆಯಾಗಿದೆ ಎಂದು ಬೆಂಗಳೂರಿನ ನ್ಯಾಯಮೂರ್ತಿಗಳು ಕಾನ್ಸಪ್ರೇನಲ್ಲಿ ವಿವರಿಸಿದರು.

ಕಕ್ಷಿದಾರರು ಪಾಲ್ಗೊಳ್ಳುವ ನಿಯುವಗಳು:ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳೇ ಈ ಲೋಕ ಅದಾಲತ್‌ಗೆ ಅರ್ಹ. ಒಂದು ಪ್ರದೇಶದಿಂದ ಇನ್ನೊಂದು ಪ್ರದೇಶದಲ್ಲಿನ ಪ್ರಕರಣದ ಇಬ್ಬರೂ ಪಕ್ಷಗಳು ಸ್ವಯಂಸಮ್ಮತಿಯಿಂದ ಸ್ಥಳೀಯ ತಮ್ಮ ಸಮೀಪದ ನ್ಯಾಯಾಲಯಗಳಲ್ಲಿ ಪಾಲ್ಗೊಳ್ಳಬೇಕು.ಒಪ್ಪಂದದ ಮೂಲಕ ಸಮಸ್ಯೆ ಪರಿಹರಿಸಲು ಸಿದ್ಧತೆ ಇರಬೇಕು.ಕಾನೂನು ಸೇವಾ ಪ್ರಾಧಿಕಾರ ಅಥವಾ ಸಂಬಂಧಿತ ವಕೀಲರ ಮೂಲಕ ಅಥವಾ ಸ್ವಯಂ ಅರ್ಜಿ ಸಲ್ಲಿಸಬಹುದು.ಲೋಕ ಅದಾಲತ್‌ನಲ್ಲಿ ಕೈಗೊಳ್ಳುವ ತೀರ್ಮಾನ ಅಂತಿಮವಾಗಿದ್ದು, ಅದಕ್ಕೆ ಮೇಲ್ಮನವಿ ಇರುವುದಿಲ್ಲ.ಒಟ್ಟಿನಲ್ಲಿ, "ಸಮಾಧಾನ ಸಮಾರಂಭ" ವಿಶೇಷ ಲೋಕ ಅದಾಲತ್ ನ್ಯಾಯಾಂಗ ವ್ಯವಸ್ಥೆಗೆ ಹೊಸ ಚೈತನ್ಯ ನೀಡುವ ಮಹತ್ವದ ಹೆಜ್ಜೆಯಾಗಿದ್ದು, ಕಕ್ಷಿದಾರರು ಇದರ ಸದುಪಯೋಗ ಪಡೆದುಕೊಳ್ಳುವಂತೆ ನ್ಯಾಯಾಂಗ ವಲಯ ಮನವಿ ಮಾಡಿದೆ.

## ಆಲಗೂರು ಘಟನೆ: ದಲಿತ ಮುಖಂಡರಿಂದ ಅಧಿಕಾರಿಗಳಿಗೆ ಮನವಿ



**ಜಮಖಂಡಿ, ಮೇ.1:** ತಾಲೂಕಿನ ಆಲಗೂರು ಗ್ರಾಮದಲ್ಲಿ ನಡೆಯುತ್ತಿರುವ ಪಂಚಕಲ್ಯಾಣ ಮಹೋತ್ಸವದಲ್ಲಿ ದಲಿತರಿಗೆ ಪ್ರತ್ಯೇಕ ಊಟ ವ್ಯವಸ್ಥೆ ಮಾಡಲಾಗಿದೆ ಎಂಬ ಆರೋಪದ ಹಿನ್ನೆಲೆ, ದಲಿತ ಮುಖಂಡರು ಸಂಬಂಧಿತ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂಬಂಧ ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ, ತಹಶೀಲ್ದಾರ್ ಅನೀಲ ಬಡಗೇರ ಹಾಗೂ ಡಿ.ವೈ.ಎಸ್.ಪಿ ಸಯ್ಯದ ರೋಷನ್ ಜಮೀರ ಅವರಿಗೆ ದೂರು ನೀಡಿ, ಘಟನೆ ಕುರಿತು ಪರಿಶೀಲನೆ ನಡೆಸಿ ಕಾನೂನು ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದರು.

ಪ್ರತ್ಯೇಕ ಊಟ ವ್ಯವಸ್ಥೆ ಸಮಾಜದಲ್ಲಿ ಭೇದಭಾವಕ್ಕೆ ಕಾರಣವಾಗುತ್ತದೆ ಎಂದು ಮುಖಂಡರು ಆಕ್ಷೇಪ ವ್ಯಕ್ತಪಡಿಸಿದರು.
ಈ ಸಂದರ್ಭದಲ್ಲಿ ರಮೇಶ್ ಬಳೋಲಗಿಡದ, ಸಾಗರ್ ಕಾಂಬಳೆ, ಸುಭಾಷ್ ರಬಕವಿ, ರವಿ ದೊಡಮನಿ, ಲಕ್ಷ್ಮಣ್ ಕಾಂಬಳೆ, ಶೇಖರ್ ಕರಡಿ, ಸಿದಲಿಂಗ್ ಕಾಂಬ್ಳೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸುಪ್ರೀಂ ಕೋರ್ಟ್ನಲ್ಲಿ ಬಾಕಿ ಇರುವ ಪ್ರಕರಣ ತ್ವರಿತವಾಗಿ ನಿವಾರಣೆ:ನ್ಯಾ.ಪ್ರಕಾಶ ಅರ್ಜುನ ಬನಸೋಡೆ



**ಬೀದರ, ಮೇ.1:** ಸುಪ್ರೀಂ ಕೋರ್ಟ್ನಲ್ಲಿ ಬಾಕಿ ಇರುವ ಪ್ರಕರಣಗಳನ್ನು ತ್ವರಿತವಾಗಿ ನಿವಾರಣೆ ಮಾಡುವ ಉದ್ದೇಶದಿಂದ ರಾಜ್ಯದ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ನ್ಯಾಯಾಲಯಗಳ ನ್ಯಾಯಾಧೀಶರೊಂದಿಗೆ ವಿಡಿಯೋ ಸಂವಾದ ಸಭೆ ನಡೆಸಲಾಯಿತು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಪ್ರಕಾಶ ಅರ್ಜುನ ಬನಸೋಡೆ ತಿಳಿಸಿದ್ದಾರೆ.
ಅವರು ಗುರುವಾರ ಜಿಲ್ಲಾ ನ್ಯಾಯಾಲಯದ ಸಭಾಂಗಣದಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ನಡೆದ ಈ ಮಹತ್ವದ ಸಭೆಯಲ್ಲಿ ಸುಪ್ರೀಂ ಕೋರ್ಟ್ನ ಮಾರ್ಗದರ್ಶನದಂತೆ ಬಾಕಿ ಇರುವ ಪ್ರಕರಣಗಳ ಶೀಘ್ರ ವಿಲೇವಾರಿ ಕುರಿತು ಚರ್ಚೆ ನಡೆಯಿತು. ಈ ವೇಳೆ ಕರ್ನಾಟಕದ ವಿವಿಧ ಜಿಲ್ಲೆಗಳ ನ್ಯಾಯಾಧೀಶರು ಭಾಗವಹಿಸಿ, ತಮ್ಮ ತಮ್ಮ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳ ಸ್ಥಿತಿಗತಿ ಹಾಗೂ ಪರಿಹಾರ ಕ್ರಮಗಳ ಬಗ್ಗೆ ವಿವರಿಸಿದರು.
ಸಭೆಯಲ್ಲಿ ಮಾತನಾಡಿದ ಅಧಿಕಾರಿಗಳು, ಪ್ರಕರಣಗಳನ್ನು ನ್ಯಾಯಾಲಯದ ಹೊರಗಡೆಯೇ ಪರಸ್ಪರ ಸಮಾಧಾನದಿಂದ (ರಾಜಿ) ಬಗೆಹರಿಸುವ ವ್ಯವಸ್ಥೆಗೆ ಹೆಚ್ಚಿನ ಒತ್ತು ನೀಡಲಾಗುತ್ತಿದೆ ಎಂದು ತಿಳಿಸಿದರು. ಇದರಿಂದ ನ್ಯಾಯಾಲಯಗಳ ಮೇಲಿನ ಭಾರ ಕಡಿಮೆಯಾಗುವುದಲ್ಲದೆ, ಸಾರ್ವಜನಿಕರಿಗೆ ಕಡಿಮೆ ಅವಧಿಯಲ್ಲಿ ನ್ಯಾಯ ದೊರಕಲು ಸಹಕಾರಿ ಆಗಲಿದೆ ಎಂದು ಹೇಳಿದರು.
ಇದೇ ಸಂದರ್ಭದಲ್ಲಿ, ಆಯಾ ತಾಲ್ಲೂಕು ಮತ್ತು ಜಿಲ್ಲಾ ನ್ಯಾಯಾಲಯಗಳಲ್ಲಿ ರಾಜಿ ಮೂಲಕ ಪ್ರಕರಣಗಳನ್ನು ಬಗೆಹರಿಸಲು ವಿಶೇಷ ಅವಕಾಶಗಳನ್ನು ಕಲ್ಪಿಸಲಾಗಿದೆ. ಇದರ ಪ್ರಯೋಜನವನ್ನು ಸಾರ್ವಜನಿಕರು ಪಡೆದುಕೊಳ್ಳುವಂತೆ ಕರೆ ನೀಡಲಾಗಿದೆ. ವಿಡಿಯೋ ಸಂವಾದದ ವೇಳೆ ನ್ಯಾಯಾಧೀಶರು ಪ್ರಕರಣಗಳ ಶೀಘ್ರ ವಿಲೇವಾರಿ, ಡಿಜಿಟಲ್ ವಿಧಾನಗಳ ಪರಿಣಾಮಕಾರಿ ಬಳಕೆ ಮತ್ತು ನ್ಯಾಯಾಂಗ ವ್ಯವಸ್ಥೆಯನ್ನು ಇನ್ನಷ್ಟು ಸುಧಾರಿಸುವ ಬಗ್ಗೆ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.
ಈ ಸಭೆಯು ನ್ಯಾಯಾಂಗ ವ್ಯವಸ್ಥೆಯನ್ನು ಹೆಚ್ಚು ಪರಿಣಾಮಕಾರಿ ಮತ್ತು ಜನಸ್ನೇಹಿಯಾಗಿಸಲು ಒಂದು ಪ್ರಮುಖ ಹೆಜ್ಜೆಯಾಗಿದ್ದು, ಬಾಕಿ ಇರುವ ಪ್ರಕರಣಗಳ ನಿವಾರಣೆಗೆ ಹೊಸ ದಿಕ್ಕು ತೋರಿಸಿದೆ ಎಂದು ತಿಳಿದುಬಂದಿದೆ.

## ಮಹಿಳಾ ಪೊಲೀಸ್ ಠಾಣೆಯಲ್ಲಿ ಮಹಿಳಾ ಸಿಬ್ಬಂದಿಗಳ ನೇಮಕಕ್ಕೆ ಆಗ್ರಹ



**ಬಳ್ಳಾರಿ, ಮೇ.01:** ಅಖಿಲ ಭಾರತ ಜನವಾದಿ ಮಹಿಳಾ ಸಂಘಟನೆ ಬಳ್ಳಾರಿ ಜಿಲ್ಲಾ ಹೋರಾಟದ ಫಲವಾಗಿ ಮಹಿಳೆಯರ ರಕ್ಷಣೆಗಾಗಿ ಮಹಿಳಾ ಪೊಲೀಸ್ ಸ್ಟೇಷನ್ ಪ್ರಾರಂಭವಾಯಿತು, ಆದರೆ ಇತ್ತೀಚಿನ ದಿನಗಳಲ್ಲಿ ಮಹಿಳಾ ಪೊಲೀಸ್ ಸ್ಟೇಷನ್ ನಲ್ಲಿ ಮಹಿಳಾ ಸಿಬ್ಬಂದಿಗಳ ಸಂಖ್ಯೆ ಕಡಿಮೆಯಾಗಿದ್ದು ಇದರಿಂದ ಮಹಿಳೆಯರ ಮೇಲಿನ ದೌರ್ಜನ್ಯ ಮತ್ತಿತರ ಸಮಸ್ಯೆಗಳ ಬಗ್ಗೆ ಪುರುಷ ಪೊಲೀಸ್ ಅಧಿಕಾರಿಗಳೊಂದಿಗೆ ಹೇಳಿಕೊಳ್ಳಲು ಮಹಿಳೆಯರಿಗೆ ಕಷ್ಟವಾಗಿದೆ. ಅಲ್ಲದೆ ಮಹಿಳೆಯರ ಸಮಸ್ಯೆಗಳು ಪರಿಹಾರವಾಗಬೇಕಾದರೆ ಹಣಕಾಸಿನ ವ್ಯವಹಾರಗಳು ನಡೆಯುತ್ತಿವೆ. ಮಹಿಳಾ ಸಮಸ್ಯೆಗಳು ಬಗೆಹರಿಸಲು ಮಹಿಳಾ ಪೊಲೀಸ್ ಸ್ಟೇಷನ್ ಹೆಸರಿಗಷ್ಟೇ ಸೀಮಿತವಾಗಿದೆ ಎಂಬ ಪರಿಸ್ಥಿತಿ ನಿರ್ಮಾಣವಾಗಿದ್ದು ಹಣವಿಲ್ಲದೆ ಕೆಲಸಗಳು ನಡೆಯುವುದು ಕಷ್ಟ ಎಂಬಂತಾಗಿದೆ. ಪೊಲೀಸ್ ಸ್ಟೇಷನ್ ಸುತ್ತಮುತ್ತ ಮಹಿಳೆಯರಿಗಿಂತ ಪುರುಷರ ಸಂಖ್ಯೆ ಹೆಚ್ಚಾಗಿರುತ್ತದೆ. ಎಲ್ಲ ಸಮಸ್ಯೆಗಳ ಗಮನಹರಿಸಿ ಬಗೆಹರಿಸಬೇಕೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಲಾಗಿದೆ.
ಈ ಸಂದರ್ಭಧಲ್ಲಿ ರಾಜ್ಯ ಅಧ್ಯಕ್ಷರು ಜೆ.ಚಂದ್ರ ಕುಮಾರಿ, ಜಿಲ್ಲಾ ಕಾರ್ಯದರ್ಶಿ ಈ.ವರಲಕ್ಷ್ಮೀ, ಜಿಲ್ಲಾ ಖಜಾಂಚಿ ಟಿ.ಈರಮ್ಮ, ಜಿಲ್ಲಾ ಸಮಿತಿ ಸದಸ್ಯರು ಓಂಕಾರಮ್ಮ ತಾಲ್ಲೂಕು ಸಮಿತಿ ಸದಸ್ಯರು ಜಿ.ಹೇಮಾವತಿ ಉಪಸ್ಥಿತರಿದ್ದರು.

# ಜಾಗತಿಕ ಮಾರುಕಟ್ಟೆಗೆ ಕಲಬುರಗಿ ರೊಟ್ಟಿ: ಅಷ್ಟಮ ಟ್ರೇಡಿಂಗ್ ಪುಣೆ ಜೊತೆ ಐತಿಹಾಸಿಕ ಒಪ್ಪಂದ

**ಕಲಬುರಗಿ:ಮೇ.1:** ಸ್ಥಳೀಯ ಉತ್ಪನ್ನಗಳನ್ನು ಜಾಗತಿಕ ಮಾರುಕಟ್ಟೆಗೆ ಪರಿಚಯಿಸುವ ಮಹತ್ವಾಕಾಂಕ್ಷಿ ಹೆಜ್ಜೆಯಾಗಿ ಅಷ್ಟಮ ಟ್ರೇಡಿಂಗ್ ಪುಣೆ ಮತ್ತು ಕಲಬುರಗಿ ರೊಟ್ಟಿ ಸಂಸ್ಥೆ ನಡುವೆ ಮಹತ್ವದ ಒಪ್ಪಂದಕ್ಕೆ ಸಹಿ ಹಾಕಲಾಗಿದೆ.
ಗೌರವಾನ್ವಿತ ಉಪ ಆಯುಕ್ತರಾದ ಶ್ರೀಮತಿ ಫೌಝಿಯಾ ತರನ್ನುಮ್ ಹಾಗೂ ಕೃಷಿ ಸಂಯುಕ್ತ ನಿರ್ದೇಶಕರಾದ ಸಮದ್ ಪಟೇಲ್ ಅವರ ಸಮ್ಮುಖದಲ್ಲಿ ಈ ಒಪ್ಪಂದ ನೆರವೇರಿದ್ದು, ಸ್ಥಳೀಯ ಉತ್ಪನ್ನಗಳಿಗೆ ಅಂತರರಾಷ್ಟ್ರೀಯ ಮಟ್ಟದಲ್ಲಿ ಹೊಸ ಅವಕಾಶಗಳ ಬಾಗಿಲು ತೆರೆದಿದೆ.
ಅಷ್ಟಮ ಟ್ರೇಡಿಂಗ್ ಸಂಸ್ಥೆಯು ಸ್ಥಳೀಯ ಹಾಗೂ ಪರಂಪರಾಗತ ಆಹಾರ ಉತ್ಪನ್ನಗಳನ್ನು ಜಾಗತಿಕ ಮಟ್ಟದಲ್ಲಿ ಪರಿಚಯಿಸುವ ಉದ್ದೇಶ ಹೊಂದಿದ್ದು, ಮೊದಲ ಹಂತದಲ್ಲಿ ಪ್ರತಿ ತಿಂಗಳು 10 ಸಾವಿರ ಕಲಬುರಗಿ ರೊಟ್ಟಿಗಳನ್ನು ವಿವಿಧ ದೇಶಗಳಿಗೆ ರಫ್ತು ಮಾಡುವ ಯೋಜನೆ ರೂಪಿಸಿದೆ. ಈ ಮೂಲಕ ಕಲಬುರಗಿ ರೊಟ್ಟಿಯ ವಿಶಿಷ್ಟ ರುಚಿಯನ್ನು ವಿಶ್ವದಾದ್ಯಂತ ಪರಿಚಯಿಸುವ ಗುರಿ ಹೊಂದಲಾಗಿದೆ.
ಇದೇ ವೇಳೆ, ಆರೋಗ್ಯಕರ ಆಹಾರ ಪದಾರ್ಥಗಳಿಗೆ ಹೆಚ್ಚುತ್ತಿರುವ ಜಾಗತಿಕ ಬೇಡಿಕೆಯನ್ನು ಗಮನದಲ್ಲಿಟ್ಟುಕೊಂಡು, ಮುಂದಿನ ದಿನಗಳಲ್ಲಿ ಸಿರಿಧಾನ್ಯ ಆಧಾರಿತ ಪೌಷ್ಟಿಕ ಆಹಾರ ಉತ್ಪನ್ನಗಳನ್ನು ವಿದೇಶಿ ಮಾರುಕಟ್ಟೆಗೆ ಪರಿಚಯಿಸುವ ಯೋಜನೆಯೂ ರೂಪಿಸಲಾಗಿದೆ.



ಕಾರ್ಯಕ್ರಮದಲ್ಲಿ ಕೆಕೆಸಿಸಿಐ ಕೃಷಿ ಉಪ ಸಮಿತಿಯ ಅಧ್ಯಕ್ಷ ಜಗದೀಶ್ ಗಾಜರೆ ಹಾಗೂ ಡಿಜಿಸ್ನೇರ್ ಸಂಸ್ಥೆಯ ಸಿಇಒ ಆಕಾಶ್ ತೋನ್ಸಳ್ಳಿ ಉಪಸ್ಥಿತರಿದ್ದು, ಈ ಸಹಭಾಗಿತ್ವಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.
ಈ ಒಪ್ಪಂದವು ಸ್ಥಳೀಯ ಉತ್ಪಾದಕರಿಗೆ ಆರ್ಥಿಕ ಬಲ ತುಂಬುವುದರ ಜೊತೆಗೆ, ಕರ್ನಾಟಕದ ಪರಂಪರೆಯ ಆಹಾರ ಪದಾರ್ಥಗಳನ್ನು ಜಾಗತಿಕ ವೇದಿಕೆಗೆ ಕೊಂಡೊಯ್ಯುವ ಹೊಸ ಅಧ್ಯಾಯಕ್ಕೆ ನಾಂದಿ ಹಾಡಿದೆ.

# ಕನ್ನೋಳ್ಳಿ ಯಲ್ಲಿ ಅಕಾಲಿಕ ಮಳೆ ಆರ್ಭಟ : ದ್ರಾಕ್ಷಿ, ಪಪಾಯಿ ಬೆಳೆ ನಾಶ, ರೈತರಿಗೆ ಲಕ್ಷಾಂತರ ನಷ್ಟ

**ಜಮಖಂಡಿ ಮೇ.1:**ಜಮಖಂಡಿ ತಾಲೂಕಿನ ಕನ್ನೋಳ್ಳಿ ಗ್ರಾಮದಲ್ಲಿ ಬುದುವಾರ ಸಾಯಂಕಾಲ ಸುಮಾರು 6 ಗಂಟೆ ಸುಮಾರಿಗೆ ಸುರಿದ ಅಕಾಲಿಕ ಮಳೆ ಹಾಗೂ ಗಾಳಿ ಮಳೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ.



ಮಳೆಯಿಂದಾಗಿ ಗ್ರಾಮದ ಹಲವಾರು ಹೊಲಗಳಲ್ಲಿ ದ್ರಾಕ್ಷಿ, ಪಪಾಯಿ ಸೇರಿದಂತೆ ವಿವಿಧ ಬೆಳೆಗಳಿಗೆ ಭಾರೀ ಹಾನಿಯಾಗಿದೆ.
ವಿಶೇಷವಾಗಿ ದ್ರಾಕ್ಷಿ ತೋಟಗಳಲ್ಲಿ ಹಣ್ಣುಗಳು ನೆಲಕ್ಕುರುಳಿ ಹಾಳಾಗಿದ್ದು, ಪಪಾಯಿ ಬೆಳೆಗೂ ಗಂಭೀರ ಹಾನಿಯಾಗಿದೆ. ಇದರಿಂದ ರೈತರಿಗೆ ಲಕ್ಷಾಂತರ ರೂಪಾಯಿಗೂ ಅಧಿಕ ನಷ್ಟ ಉಂಟಾಗಿದೆ ಎಂದು ತಿಳಿದುಬಂದಿದೆ.
ಈ ಕುರಿತು ರೈತ ಮುಖಂಡ ಸುಭಾಷ್ ಸಿಂಧೆ ಮಾತನಾಡಿ, "ಸೂರ್ಯನ ತಾಪದ ನಂತರ ಏಕಾಏಕಿ ಸುರಿದ ಅಕಾಲಿಕ ಮಳೆಯಿಂದ ದ್ರಾಕ್ಷಿ ಸೇರಿದಂತೆ ಎಲ್ಲಾ ಬೆಳೆಗಳು ಸಂಪೂರ್ಣವಾಗಿ ಹಾಳಾಗಿವೆ. ಕೇವಲ ಕೆಲವು ಎಕರೆ ಮಾತ್ರವಲ್ಲ, ಸುಮಾರು 200 ಎಕರೆಗಳಷ್ಟು ದ್ರಾಕ್ಷಿ ತೋಟಗಳು ನಾಶವಾಗಿವೆ. ಟೊಮೇಟೊ, ದ್ರಾಕ್ಷಿ ಸೇರಿದಂತೆ ಯಾವುದೇ ಬೆಳೆ ಉಳಿದಿಲ್ಲ. ಲಕ್ಷಾಂತರ, ಕೋಟ್ಯಾಂತರ ರೂಪಾಯಿ ನಷ್ಟವಾಗಿದೆ," ಎಂದು ತಿಳಿಸಿದ್ದಾರೆ.
"ರೈತರು ದ್ರಾಕ್ಷಿ ಬೆಳೆಸಲು ಎರಡು–ಮೂರು ಲಕ್ಷ ರೂಪಾಯಿ ಖರ್ಚು ಮಾಡಿ ಕಷ್ಟಪಟ್ಟು ತೋಟಗಳನ್ನು ಬೆಳೆಸಿದ್ದರು. ಆದರೆ ಅಕಾಲಿಕ ಮಳೆಯೊಂದು ಎಲ್ಲಾ ಪರಿಶ್ರಮವನ್ನು ನಾಶಮಾಡಿದೆ. ಮನೆಗಳ ಶೆಡ್ಗಳು ಹಾನಿಗೊಳಗಾಗಿದ್ದು, ಪತ್ರಾಸುಗಳು ಹಾರಿ ಹೋಗಿವೆ," ಎಂದು ಹೇಳಿದರು.
"ಇನ್ನೂ 24 ಗಂಟೆಗಳು ಕಳೆದರೂ ಜಿಲ್ಲಾಧಿಕಾರಿ ಹಾಗೂ ತಹಸೀಲ್ದಾರರು ಸ್ಥಳಕ್ಕೆ ಭೇಟಿ ನೀಡಿಲ್ಲ. ತೋಟಗಾರಿಕೆ ಇಲಾಖೆಯವರು ಕೂಡ ಗಮನ ಹರಿಸುತ್ತಿಲ್ಲ. ರೈತರಿಗೆ ಧೈರ್ಯ ತುಂಬುವ ಕೆಲಸವೂ ಆಗುತ್ತಿಲ್ಲ," ಎಂದು ಆಕ್ರೋಶ ವ್ಯಕ್ತಪಡಿಸಿದರು.
"ಇಂತಹ ಅಕಸ್ಮಾತ್ ಮಳೆಯಿಂದ ರೈತರು ಸಾಲದ ಬಾಧೆಗೆ ಒಳಗಾಗುತ್ತಿದ್ದಾರೆ. ಕೆಲವರು ಆತ್ಮಹತ್ಯೆಯ ದಾರಿಯತ್ತ ತಳ್ಳಲ್ಪಡುತ್ತಿದ್ದಾರೆ. ತಕ್ಷಣ ಸರ್ಕಾರ ಪರಿಹಾರ ಘೋಷಿಸಿ ರೈತರ ನೆರವಿಗೆ ಬರಬೇಕು," ಎಂದು ಮನವಿ ಮಾಡಿದರು.
ಈ ಕುರಿತು ರೈತ ಶ್ರೀ ರಾಜು ಗಣಪತಿ ಮೋಹಿತೆ ಹಾಗೂ ಗ್ರಾಮಸ್ಥರು ಮಾಹಿತಿ ನೀಡಿದ್ದು, ಸರ್ಕಾರ ತಕ್ಷಣ ಬೆಳೆ ಹಾನಿ ಪರಿಶೀಲಿಸಿ ಸೂಕ್ತ ಪರಿಹಾರ ನೀಡಬೇಕೆಂದು ಆಗ್ರಹಿಸಿದ್ದಾರೆ.

# ಬುದ್ಧನ ಶಾಂತಿ ಮತ್ತು ಅಹಿಂಸೆಯ ಸಂದೇಶಗಳು ಇಂದಿನ ಜಗತ್ತಿಗೆ ಅತ್ಯಗತ್ಯ:ಶಾಸಕ ಅಲ್ಲಮಪ್ರಭು ಪಾಟೀಲ

**ಕಲಬುರಗಿ,ಮೇ.01:**ವಿಶ್ವವ್ಯಾಪಿ ಬುದ್ಧನ ಶಾಂತಿ ಮತ್ತು ಅಹಿಂಸೆಯ ಸಂದೇಶಗಳು ಇಂದಿನ ಸಂಘರ್ಷಮಯ ಜಗತ್ತಿಗೆ ಅತ್ಯಗತ್ಯವಾಗಿವೆ. ಬುದ್ಧನ ಜ್ಞಾನೋದಯದ ಕಿರಣಗಳು ಕೇವಲ ಒಂದು ಧರ್ಮಕ್ಕೆ ಸೀಮಿತವಾಗದೆ, ಇಡೀ ಮಾನವಕುಲಕ್ಕೆ ಬೆಳಕಾಗಿವೆ ಎಂದು ಕಲಬುರಗಿ ದಕ್ಷಿಣ ಕ್ಷೇತ್ರದ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಪ್ರತಿಪಾದಿಸಿದರು.
ನಗರದ ಜಗತ್ ವೃತ್ತದ ಬಳಿಯ ಲುಂಬಿನಿ ಉದ್ಯಾನವನದ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆ ಎದುರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ 'ಬುದ್ಧ ಜಯಂತ್ಯೋತ್ಸವ'ದ ವೇದಿಕೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಬಾಬಾಸಾಹೇಬ್ ಅಂಬೇಡ್ಕರ್ ಅವರು ಶೋಷಿತರ ಪರವಾಗಿ ಹೋರಾಡುತ್ತಾ, ಅಂತಿಮವಾಗಿ ಬುದ್ಧನ ವೈಜ್ಞಾನಿಕ ಮತ್ತು ಮಾನವೀಯ ತತ್ವಗಳಿಂದ ಪ್ರಭಾವಿತರಾದರು. 1956ರಲ್ಲಿ ಲಕ್ಷಾಂತರ ಅನುಯಾಯಿಗಳೊಂದಿಗೆ ಬೌದ್ಧ ಧರ್ಮ ಸ್ವೀಕರಿಸುವ ಮೂಲಕ ಸಮಾನತೆಯ ಹೊಸ ಯುಗವನ್ನು ಆರಂಭಿಸಿದರು. ಬುದ್ಧನ ಜನನ, ಜ್ಞಾನೋದಯ ಹಾಗೂ ಮಹಾಪರಿನಿರ್ವಾಣ ಈ ಮೂರೂ ಘಟನೆಗಳು ಒಂದೇ ದಿನ ಅಂದರೆ ವೈಶಾಖ ಪೂರ್ಣಿಮೆಯಂದೇ ಸಂಭವಿಸಿರುವುದು ವಿಶ್ವ ಇತಿಹಾಸದ ಅಪರೂಪದ ವಿದ್ಯಮಾನ. ಅಶೋಕ ಚಕ್ರವರ್ತಿಯ ಕಾಲದಿಂದ ಹರಡುತ್ತಾ ಬಂದ ಈ ಧರ್ಮದ ಹಾದಿಯಲ್ಲಿ ಇಂದಿನ ಯುವ ಪೀಳಿಗೆ ಸಾಗಬೇಕು ಎಂದು ಕರೆ ನೀಡಿದರು.

**ತತ್ವಗಳ ಪಾಲನೆ ಅಗತ್ಯ:**
ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರ್ ಅವರು, ಬುದ್ಧ, ಬಸವ ಮತ್ತು ಅಂಬೇಡ್ಕರ್ ಈ ಮೂವರೂ ಮಹಾಪುರುಷರ ಆಶಯ ಒಂದೇ ಆಗಿತ್ತು. ಶಾಂತಿ, ಕರುಣೆ ಮತ್ತು ಸತ್ಯದ ಮಾರ್ಗವನ್ನು ಗೌತಮ ಬುದ್ಧ ತೋರಿಸಿಕೊಟ್ಟರೆ, ಸಂವಿಧಾನದ ಮೂಲಕ ಗೌರವಯುತವಾಗಿ ಬದುಕುವುದು ಹೇಗೆಂಬುದನ್ನು ಅಂಬೇಡ್ಕರ್ ಕಲಿಸಿಕೊಟ್ಟಿದ್ದಾರೆ. ಇವರ ತತ್ವಗಳನ್ನು ಪಾಲಿಸುವುದೇ ನಾವು ಅವರಿಗೆ ಸಲ್ಲಿಸುವ ನಿಜವಾದ ಗೌರವ ಎಂದರು.

**ವಿಶೇಷ ಉಪನ್ಯಾಸ:**
ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಸದಸ್ಯ ಸುರೇಶ ಬಡಿಗೇರ ಅವರು ವಿಶೇಷ ಉಪನ್ಯಾಸ ನೀಡಿ, "ಬಸವಣ್ಣನವರ ಅನುಭವ ಮಂಟಪಕ್ಕಿಂತಲೂ 2500 ವರ್ಷಗಳ ಹಿಂದೆಯೇ ಬುದ್ಧ ಸಮಾನತೆಯ ಸಂಘಟನೆಯನ್ನು ರೂಪಿಸಿದ್ದರು. ಅಂಬೇಡ್ಕರ್ ಅವರು 1935ರಲ್ಲಿ ಮಾಡಿದ ಪ್ರತಿಜ್ಞೆಯಂತೆ ಬೌದ್ಧ ಧರ್ಮ ಸ್ವೀಕರಿಸಿ ಭಾರತಕ್ಕೆ ಪ್ರಬುದ್ಧ ಪ್ರಜ್ಞೆಯನ್ನು ನೀಡಿದರು ಎಂದು ವಿವರಿಸಿದರು.
ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕಿ ಜಗದೀಶ್ವರಿ.ಅ. ನಾಸಿ ಸ್ವಾಗತಿಸಿದ್ದರು. ಭಂತೆ ಧಮ್ಮ ಜ್ಯೋತಿ ಬುದ್ಧ ವಂದನೆ ಸಲ್ಲಿಸಿದರು. ಸಿದ್ಧಾರ್ಥ ಚಿಮ್ಮಾ ಇದ್ಲಾಯಿ ಪ್ರಾರ್ಥನೆ ಗೀತೆ ನಡೆಸಿಕೊಟ್ಟರು.
ಕಾರ್ಯಕ್ರಮದಲ್ಲಿ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ್ ಬುದ್ಧ ಜಯಂತಿ ಉತ್ಸವ ಸಮಿತಿ ಅಧ್ಯಕ್ಷರು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ , ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಎಸ್.ಪಿ. ಅಡ್ಡೂರು ಶ್ರೀನಿವಾಸಲು, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ,ಕರ್ನಾಟಕ ರಾಜ್ಯ ಸರ್ಕಾರಿ-ಅರೆ ಸರ್ಕಾರಿ ಎಸ್.ಸಿ-ಎಸ್.ಟಿ ನೌಕರರ ಸಂಘದ ರಾಜ್ಯಾಧ್ಯಕ್ಷ ಮಹೇಶ ಹುಬಳ್ಳಿ, ಸಮಾಜದ ಮುಖಂಡರ ಎ.ಬಿ. ಹೊಸಮನೆ. ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಸಾರ್ವಜನಿಕರು, ವಿವಿಧ ಸಮಾಜದ ಮುಖಂಡರು ಭಾಗವಹಿಸಿದ್ದರು.

**ಪ್ರತಿಮೆಗೆ ಗೌರವ ನಮನ ಸಲ್ಲಿಕೆ:**
ಬುದ್ಧ ಜಯಂತಿ ಉತ್ಸವ ಸಮಿತಿ ಅಧ್ಯಕ್ಷರು ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ , ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಎಸ್.ಪಿ. ಅಡ್ಡೂರು ಶ್ರೀನಿವಾಸಲು, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ,ಕರ್ನಾಟಕ ರಾಜ್ಯ ಸರ್ಕಾರಿ-ಅರೆ ಸರ್ಕಾರಿ ಎಸ್.ಸಿ-ಎಸ್.ಟಿ ನೌಕರರ ಸಂಘದ ರಾಜ್ಯಾಧ್ಯಕ್ಷ ಮಹೇಶ ಹುಬಳ್ಳಿ, ಸಮಾಜದ ಮುಖಂಡ ಎ.ಬಿ. ಹೊಸಮನೆ. ಸೇರಿದಂತೆ ಬುದ್ಧನ ಪ್ರತಿಮೆಗೆ ಮೇಣದ ಬತ್ತಿ ಬೆಳಗುವ ಮೂಲಕ ಗೌತಮ ಬುದ್ಧಗೆ ಗೌರವ ನಮನ ಸಲ್ಲಿಸಿದರು.

# ಮಹಿಳಾ ಡಿಗ್ರಿ ಕಾಲೇಜ್ ಪ್ರವೇಶ ಪ್ರಾರಂಭ

**ಬಳ್ಳಾರಿ, ಮೇ.01:** ನಗರದ ರೇಡಿಯೋ ಪಾರ್ಕ್ ಬಳಿ ಇರುವ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಲ್ಲಿ

2026–27 ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಬಿ ಎ, ಬಿ ಕಾಂ ಹಾಗೂ ಬಿ ಎಸ್ಸಿ ಪದವಿ ಪ್ರವೇಶಾತಿ ಪ್ರಾರಂಭವಾಗಿದೆಂದು ಕಾಲೇಜಿನ ಪ್ರಾಂಶುಪಾಲೆ ಪ್ರಜ್ಞಾ ಅವರು ತಿಳಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಉತ್ತಮ ಗುಣಮಟ್ಟದ ಶಿಕ್ಷಣದ ಜೊತೆಗೆ ನೈತಿಕತೆ, ಮೌಲ್ಯಗಳು, ಸಾಮಾಜಿಕ ಸಂಬಂಧಗಳ ನಿಭಾಯಿಸುವಿಕೆ, ಒತ್ತಡದಿಂದ ಹೊರಬರಲು ವಿದ್ಯಾರ್ಥಿಗಳಿಗೆ ತರಬೇತಿ ನೀಡುವುದರ ಮೂಲಕ ಪ್ರತಿ ಇಬ್ಬರು ವಿದ್ಯಾರ್ಥಿನಿಯರು ಇನ್ನಿಬ್ಬರು ವಿದ್ಯಾರ್ಥಿನಿಯರಿಗೆ ತರಬೇತಿ ನೀಡುವುದರ ಮೂಲಕ ಒತ್ತಡ ರಹಿತ ಸ್ವಾಸ್ಥ್ಯ ಸಮಾಜ ನಿರ್ಮಾಣಕ್ಕೆ ಅಣಿಗೊಳಿಸುವ ಸದುದ್ದೇಶವನ್ನು ಹೊಂದಿದೆ ಎಂದಿದ್ದಾರೆ.




## ಬಿಸಿಲಿನ ತಾಪಮಾನ ಹೆಚ್ಚು ಹಿನ್ನೆಲೆ:ಮಧ್ಯಾಹ್ನ ಹೊರಹೋಗುವದನ್ನು ತಪ್ಪಿಸಿ ತಿಳಿ ಹಗುರವಾದ ಹತ್ತಿ ಬಟ್ಟೆ ಧರಿಸುವಂತೆ ಸಾರ್ವಜನಿಕರಿಗೆ ಡಿ.ಸಿ. ಸಲಹೆ



**ಕಲಬುರಗಿ:ಮೇ.1:** ಕಲಬುರಗಿ ಜಿಲ್ಲೆಯಾದ್ಯಂತ ಕಲಬುರಗಿ ಜಿಲ್ಲೆಯಾದ್ಯಂತ ಕಳೆದ ಮೂರು ದಿನಗಳಿಂದ ಸತತವಾಗಿ ಹೆಚ್ಚಿನ ತಾಪಮಾನ (45ಲಿಅ) ದಾಖಲಾಗುತ್ತಿರುವುದರಿಂದ ಹೀಟ್ ವೇವ್ (ಶಾಖದ ಹೊಡೆತ) ಮತ್ತು ಹೀಟ್ ವೇವ್ ಸ್ಟೋಕ್ ನಿಂದಾಗಿ ಸಾರ್ವಜನಿಕರರು ಮತ್ತು ಪ್ರಾಣಿಗಳ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆಯಿರುವುದರಿಂದ ಬಿಸಿಲಿನ ಹೊಡೆತದಿಂದ ರಕ್ಷಿಸಿಕೊಳ್ಳಲು ಸಾರ್ವಜನಿಕರು ವಿಶೇಷವಾಗಿ ಮಧ್ಯಾಹ್ನ 12 ರಿಂದ ಸಂಜೆ 4 ಗಂಟೆ ವರೆಗೆ ಮನೆಯಿಂದ ಹೊರಹೋಗುವದನ್ನು ಸಾಧ್ಯವಾದಷ್ಟು ಮಟ್ಟಿಗೆ ತಪ್ಪಿಸುವಂತೆ ಡಿ.ಸಿ ಬಿ.ಫೌಜಿಯಾ ತರನ್ನಮ್ ಅವರು ಸಲಹೆ ನೀಡಿದ್ದಾರೆ.

ಬಿಸಿಲಿನಲ್ಲಿ ಹೋಗುವಾಗ ದೇಹಕ್ಕೆ ರಕ್ಷಣಾತ್ಮಕವಾಗಿ ಕನ್ನಡಕಗಳು, ಛತ್ರಿ–ಟೋಪಿ, ಬೂಟುಗಳು ಅಥವಾ ಚಪ್ಪಲ್‌ಗಳನ್ನು ಬಳಸಬೇಕು. ಪ್ರಯಾಣಿಕರು ತಮ್ಮೊಂದಿಗೆ ನೀರು ತೆಗೆದುಕೊಂಡು ಹೋಗಬೇಕು. ಹಗುರವಾದ ತಿಳಿ ಬಣ್ಣದ, ಸಡಿಲವಾದ ಮತ್ತು ರಂಧ್ರವಿರುವ ಹತ್ತಿ ಬಟ್ಟೆಗಳನ್ನು ಧರಿಸುವಂತೆ ಹಾಗೂ ತಾಪಮಾನ ಹೆಚ್ಚಿರುವಾಗ ಶ್ರಮದಾಯಕ ಚಟುವಟಿಕೆಗಳನ್ನು ತಪ್ಪಿಸುವಂತೆ ಸಲಹೆ ನೀಡಿರುವ ಅವರು, ಹೆಚ್ಚಾಗಿ ಬಾಯಾರಿಕೆ ಇಲ್ಲದಿದ್ದರೂ ಸಹ ಸಾಕಷ್ಟು ನೀರು ಕುಡಿಯಬೇಕೆಂದು ಸಾರ್ವಜನಿಕರಲ್ಲಿ ಡಿ.ಸಿ. ಮನವಿ ಮಾಡಿದ್ದಾರೆ.

ಇನ್ನು ರೈತರು, ಕೃಷಿ ಕಾರ್ಮಿಕರು ಹಾಗೂ ಸಾರ್ವಜನಿಕರು ಮಧ್ಯಾಹ್ನ 12 ರಿಂದ 3 ಗಂಟೆಯವರೆಗೆ ಹೊರಗೆ ಕೆಲಸ ಮಾಡುವುದನ್ನು ತಪ್ಪಿಸಬೇಕು. ಅನಿವಾರ್ಯ ಪರಿಸ್ಥಿತಿಯಲ್ಲಿ ಟೋಪಿ ಅಥವಾ ಛತ್ರಿ ಬಳಸುವುದರ ಜೊತೆಗೆ ತಲೆ, ಕುತ್ತಿಗೆ, ಮುಖ ಮತ್ತು ಕೈಕಾಲುಗಳ ಮೇಲೆ ಒದ್ದೆಯಾದ ಬಟ್ಟೆಯನ್ನು ಬಳಸುವುದು ಒಳ್ಳೆಯದು. ನಿಲ್ಲಿಸಿದ ವಾಹನಗಳಲ್ಲಿ ಮಕ್ಕಳನ್ನು ಅಥವಾ ಸಾಕುಪ್ರಾಣಿಗಳನ್ನು ಬಿಡಬಾರದು. ಇನ್ನು ಮನೆಯನ್ನು ತಂಪಾಗಿರಿಸಲು ಪರದೆಗಳು, ಶಟರ್‌ಗಳು ಅಥವಾ ಸಗಳನ್ನು ಬಳಸುವುದು ಮತ್ತು ತಣ್ಣೀರಿನಲ್ಲಿ ಸ್ನಾನ ಮಾಡುವುದು ಆರೋಗ್ಯಕರ ಎಂದಿದ್ದಾರೆ.

ಶಾಲಾ–ಕಾಲೇಜುಗಳ ಆವರಣದಲ್ಲಿ ಕುಡಿಯುವ ನೀರಿನ ನಿರಂತರ ಲಭ್ಯತೆಯನ್ನು ಮುಖ್ಯಸ್ಥರು ಖಚಿತಪಡಿಸಿಕೊಳ್ಳಬೇಕು. ಬೆಳಿಗ್ಗೆ 11 ರಿಂದ ಸಂಜೆ 4.30 ಗಂಟೆ ವರೆಗೆ ವಿದ್ಯಾರ್ಥಿಗಳಿಗೆ ಹೊರಾಂಗಣ ಚಟುವಟಿಕೆಗಳನ್ನು ತಪ್ಪಿಸಬೇಕು. ಮಕ್ಕಳಿಗೆ ಶಾಖಾದ ಆರಂಭಿಕ ರೋಗಲಕ್ಷಣಗಳ ಮೇಲ್ವಿಚಾರಣೆ ವಹಿಸಬೇಕು.

ಜಿಲ್ಲೆಯ ಎಲ್ಲಾ ಪ್ರಾಥಮಿಕ ಪಿ.ಎಚ್.ಸಿ–ಸಿ.ಎಚ್.ಸಿ, ತಾಲೂಕು–ಜಿಲ್ಲಾ ಆಸ್ಪತ್ರೆಗಳಲ್ಲಿ ಔಖಖ, ಖಗಿ ದ್ರವಗಳು ಮತ್ತು ಐಸ್ ಪ್ಯಾಕ್ ದಾಸ್ತಾನುಗಳು ಇರುವಂತೆ ನೋಡಿಕೊಳ್ಳಬೇಕು. ಶಾಖದ ಕಾಯಿಲೆ ಗುರುತಿಸುವಿಕೆ ಮತ್ತು ಸೂಕ್ತ ಚಿಕಿತ್ಸೆಗೆ ಸಿಬ್ಬಂದಿಗಳನ್ನು ಸಂವೇದನಶೀಲರನ್ನಾಗಿ ಮಾಡಬೇಕು. ಸಾರ್ವರ್ಜನಿಕರು/ರೋಗಿಗಳು ಕಾಯುವ ಮತ್ತು ಚಿಕಿತ್ಸಾ ಪ್ರದೇಶಗಳಲ್ಲಿ ತಂಪಾಗಿಸುವಿಕೆ, ಗಾಳಿ ವ್ಯವಸ್ಥೆ ಮತ್ತು ನೀರು ಸರಬರಾಜು ಇರಬೇಕು ಹಾಗೂ ವೈದ್ಯಕೀಯ ಅಧಿಕಾರಿಗಳು ಶಾಖದ ಮಾನದಂಡಗಳನ್ನು ಮತ್ತು "ಕೂಲ್ ಫಸ್ಟ್" ಪ್ರೋಟೋಕಾಲ್ ಅನ್ನು ಪಾಲನೆ ಮಾಡುತ್ತಿರುವ ಕುರಿತು ಖಚಿತಪಡಿಸಿಕೊಳ್ಳಬೇಕೆಂದು ತಿಳಿಸಿದ್ದಾರೆ.

ಗ್ರಾಮೀಣ ಭಾಗದಲ್ಲಿ ನಿರಂತರ ನೀರು ಪೂರೈಕೆ ಬಗ್ಗೆ ಸಮನ್ವಯ ಸಾಧಿಸಬೇಕು. ವಿದ್ಯುತ್ ಕಡಿತದ ದೂರುಗಳನ್ನು ತ್ವರಿತ ಪರಿಹಾರಕ್ಕೆ ಆದ್ಯತೆ ನೀಡುವುದು. ಜನದಟ್ಟಣೆ ಹೆಚ್ಚಿರುವ ಸ್ಥಳಗಳಲ್ಲಿ ತಾತ್ಕಾಲಿಕ ಕುಡಿಯುವ ನೀರಿನ ವ್ಯವಸ್ಥೆ ಮಾಡುವುದೆಂದು ಡಿ.ಸಿ. ಅವರು ಸೂಚಿಸಿದ್ದಾರೆ..

ಕಾರ್ಮಿಕ ಇಲಾಖೆಯು ಮಧ್ಯಾಹ್ನ 12 ರಿಂದ 3 ಗಂಟೆ ವರೆಗೆ ಕಾರ್ಮಿಕರು ಹೊರಾಂಗಣ ಕೆಲಸಗಳನ್ನು ಮಾಡದಂತೆ ತಪ್ಪಿಸಿ ಬೆಳಿಗ್ಗೆ ಮತ್ತು ಸಂಜೆ ವೇಳೆಗೆ ಕೆಲಸ ಮಾಡಲು ಸೂಚನೆ ನೀಡಬೇಕು. ಕೆಲಸದ ಸ್ಥಳದಲ್ಲಿ ತಂಪಾದ ಕುಡಿಯುವ ನೀರನ್ನು ಪೂರೈಸಬೇಕು. ತಲೆ ಸುತ್ತು, ವಾಂತಿ, ಹೆಚ್ಚು ಬೆವರು, ದೇಹದ ತಾಪಮಾನ ಹೆಚ್ಚಳ ಲಕ್ಷಣಗಳು ಕಂಡುಬಂದರೆ ತಕ್ಷಣ ವೈದ್ಯಕೀಯ ಸಹಾಯ ಪಡೆಯಬೇಕು. ತಕ್ಷಣ ಸಮೀಪದ ಆರೋಗ್ಯ ಕೇಂದ್ರಕ್ಕೆ ಕರೆದೊಯ್ಯಬೇಕು. ಔಖಖ ದ್ರಾವಣ ಅಥವಾ ನೀರು ನೀಡಬೇಕು. ಉಷ್ಣತೆಯ ಅಲೆ ಸಮಯದಲ್ಲಿ ಜೆಸ್ಕಾಂ ಸಿಬ್ಬಂದಿಗಳು ಸಾರ್ವಜನಿಕರ ಸುರಕ್ಷತೆ ದೃಷ್ಠಿಯಿಂದ ನಿರಂತರ ವಿದ್ಯುತ್ ಪೂರೈಕೆ ಖಚಿತಪಡಿಸುವುದು. ಟ್ರಾನ್ಸ್ ಫಾರ್ಮರ್ ಗಳು, ಲೈನ್ಗಳು ಹೆಚ್ಚು ಬಿಸಿಯಾಗದಂತೆ ನಿರಂತರ ಪರಿಶೀಲನೆ ಮಾಡುವುದು. ಓವರ್‌ಲೋಡ್ ತಪ್ಪಿಸಲು ಲೋಡ್ ಮ್ಯಾನೇಜ್ಮೆಂಟ್ ಕ್ರಮಗಳನ್ನು ತೆಗೆದುಕೊಳ್ಳಬೇಕು. ಇನ್ನು ಆಸ್ಪತ್ರೆ, ನೀರು ಸರಬರಾಜಿಗೆ ವಿದ್ಯುತ್ ಪೂರೈಕೆ ನಿರಂತರವಾಗಿರಬೇಕು. 247 ತುರ್ತು ದುರಸ್ತಿ ತಂಡ ನಿಯೋಜಿಸಬೇಕೆಂದು ತಿಳಿಸಲಾಗಿದೆ.

ಚಹಾ–ಕಾಫಿ ತ್ಯಜಿಸಿ,ಲಸ್ಸಿ–ಮಜ್ಜಿಗೆ ಸೇವಿಸಿ:

ಬಿಸಿಲಿನ ಶಾಖ ಹೆಚ್ಚಿರುವುದರಿಂದ ದೇಹವನ್ನು ನಿರ್ಜಲೀಕರಣಗೊಳಿಸುವ ಆಲ್ಕೋಹಾಲ್, ಕಾರ್ಬೋನೇಟೆಡ್ ತಂಪು ಪಾನೀಯಗಳನ್ನು, ಚಹಾ, ಕಾಫಿ ಹಾಗೂ ಹೆಚ್ಚಿನ ಪ್ರೋಟೀನ್ ಆಹಾರ ಮತ್ತು ಹಳೆಯ ಆಹಾರವನ್ನು ಸೇವಿಸದೆ ಓ.ಆರ್.ಎಸ್. ಅಲ್ಲದೆ ಮನೆಯಲ್ಲಿ ತಯಾರಿಸಿದ ಪಾನೀಯಗಳಾದ ಲಸ್ಸಿ, ತೋರಣಿ (ಅಕ್ಕಿ ನೀರು), ನಿಂಬೆ ನೀರು, ಮಜ್ಜಿಗೆ, ಇತ್ಯಾದಿಗಳನ್ನು ಸೇವಿಸದಲ್ಲಿ ದೇಹ ಮರು–ಜಲೀಕರಣಗೊಳ್ಳುತ್ತದೆ ಎಂದಿರುವ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾಗಿರುವ ಜಿಲ್ಲಾಧಿಕಾರಿಗಳು, ಬಿಸಿಲಿನಿಂದ ಮೂರ್ಛೆ ಹೋದಲ್ಲಿ ಅಥವಾ ಅನಾರೋಗ್ಯ ಎನಿಸಿದಲ್ಲಿ ತಕ್ಷಣ ವೈದ್ಯರನ್ನು ಸಂಪರ್ಕಿಸುವಂತೆ ಕೋರಿದ್ದಾರೆ.

ಜಾನುವಾರುಗಳ ರಕ್ಷಣೆ ಹೇಗೆ:? ಜಾನುವಾರುಗಳನ್ನು ಮುಂಜಾನೆ ಮತ್ತು ಸಾಯಂಕಾಲ ಸಮಯದಲ್ಲಿ ಮೇಯಿಸಬೇಕು ಮತ್ತು ಉಳುಮೆಗೆ ಬಳಸಿಕೊಳ್ಳಬೇಕು. ನಿರ್ಜಲೀಕರಣಗೊಂಡ ಜಾನುವಾರುಗಳಿಗೆ ಉಪ್ಪು, ಅಡುಗೆ ಸೋಡಾ, ಬೆಲ್ಲ ಹಾಗೂ ಲಿಂಬೆ ಹಣ್ಣಿನ ರಸವನ್ನು ನೀರಿನಲ್ಲಿ ಮಿಶ್ರಣ ಮಾಡಿ ದಿನದಲ್ಲಿ 3 ರಿಂದ 4 ಸಾರಿ ಕುಡಿಸಬೇಕು. ಜಾನುವಾರುಗಳಿಗೆ ಮುಂಜಾಗ್ರತೆಯಾಗಿ ಸಾಂಕ್ರಾಮಿಕ ರೋಗಗಳಿಗೆ ಲಸಿಕೆಗಳನ್ನು ಕಾಲಕಾಲಕ್ಕೆ ಹಾಕಿಸಬೇಕು. ಪ್ರಾಣಿಗಳ ಶೆಡ್ಗಳನ್ನು ತಂಪಾಗಿಸಲು ಒದ್ದೆಯಾದ ಗೋಣಿ ಚೀಲಗಳನ್ನು ಬಳಸುವುದು. ಬೆಳಿಗ್ಗೆ 11 ರಿಂದ ಸಂಜೆ 4ರ ವರೆಗೆ ಪ್ರಾಣಿಗಳ ಚಲನೆಯನ್ನು ನಿಬರ್‌ಂಧಿಸುವುದು. ಕೋಳಿ ಸಾಕಣೆದಾರರು ಕೋಳಿ ಶೆಡ್ಗಳನ್ನು ತಂಪಾಗಿಸುವಿಕೆ, ಗಾಳಿ ವ್ಯವಸ್ಥೆ, ನೀರು ಸರಬರಾಜು ಕುರಿತು ಗಮನ ಹರಿಸಬೇಕು.

ಇನ್ನು ರೈತರು ತಮ್ಮ ಜಮೀನಿನಲ್ಲಿರುವ ಮೇವನ್ನು ಯಾವುದೇ ಕಾರಣಕ್ಕೂ ಸುಟ್ಟು ಹಾಕದೇ ಬಣವೇ ಹಾಕಿ ಅಥವಾ ಸುರುಳಿ ಸುತ್ತಿಟ್ಟುಕೊಂಡು (ಬೇಲಿಂಗ್) ಮೇವನ್ನು ಸಂಗ್ರಹಿಸಬೇಕು. ಇದರಿಂದ ಭೂಮಿಯ ಫಲವತ್ತತೆ ಹಾಳಾಗದಂತೆ ತಡೆಯುವುದರ ಜೊತೆಗೆ ಜಾನುವಾರುಗಳಿಗೆ ಮೇವಿನ ಕೊರತೆ ನೀಗಿಸಬಹುದಾಗಿದೆ.

## ನಾರಿ ಶಕ್ತಿ ವಂದನ್ ಅಧಿನಿಯಮಕ್ಕೆ ಕಾಂಗ್ರೆಸ್ ದ್ರೋಹ



**ಹುಬ್ಬಳ್ಳಿ,ಮೇ.1:** ಕಾಂಗ್ರೆಸ್ ಮತ್ತು ಅದರ ಮಿತ್ರ ಪಕ್ಷಗಳು ಮಹಿಳಾ ಸಬಲೀಕರಣದ ಬಗ್ಗೆ ಮಾತನಾಡುವುದು ಕೇವಲ ತೋರಿಕೆಗಾಗಿ ಎಂಬುದು 'ನಾರಿ ಶಕ್ತಿ ವಂದನ್ ಅಧಿನಿಯಮ'ದ ವಿರುದ್ಧ ಅವರು ತೋರಿದ ನಿಲುವಿನಿಂದ ಸಾಬೀತಾಗಿದೆ ಎಂದು ಬಿಜೆಪಿ ಯುಬ ಮುಖಂಡ ವೆಂಕಟೇಶ ಕಾಟವೆ ಹೇಳಿದ್ದಾರೆ.

ದಶಕಗಳ ಕಾಲ ಮಹಿಳೆಯರನ್ನು ಕೇವಲ ಮತಬ್ಯಾಂಕ್ ಆಗಿ ಬಳಸಿಕೊಂಡ ಕಾಂಗ್ರೆಸ್ ಮತ್ತು ವಿರೋಧ ಪಕ್ಷಗಳು, ಇಂದು ಮಹಿಳೆಯರಿಗೆ ಸಂಸತ್ತು ಮತ್ತು ವಿಧಾನಸಭೆಗಳಲ್ಲಿ ಶೇಕಡಾ 33ರಷ್ಟು ರಾಜಕೀಯ ಮೀಸಲಾತಿ ನೀಡುವ ಐತಿಹಾಸಿಕ ಮಸೂದೆಯನ್ನು ಬೆಂಬಲಿಸುವ ಬದಲು ಅದರ ವಿರುದ್ಧ ನಿಂತಿರುವುದು ಅತ್ಯಂತ ಖಂಡನೀಯ.ಈ ವಿರೋಧ ಪಕ್ಷಗಳು ಮಸೂದೆಯ ವಿರುದ್ಧ ಮತ ಚಲಾಯಿಸುವ ಮೂಲಕ ತಾವು ಮಹಿಳಾ ವಿರೋಧಿಗಳು ಎಂಬುದನ್ನು ಇಡೀ ದೇಶಕ್ಕೆ ಮತ್ತೊಮ್ಮೆ ಸ್ಪಷ್ಟಪಡಿಸಿವೆ ಎಂದು ಅವರು ಹೇಳಿದ್ದಾರೆ.ಹಿಂದೆ ಇದೇ ಕಾಂಗ್ರೆಸ್ ಅಧಿಕಾರದಲ್ಲಿದ್ದಾಗ ಮಹಿಳಾ ಮೀಸಲಾತಿಯನ್ನು ಜಾರಿಗೆ ತರದೆ ಕಾಲಹರಣ ಮಾಡಿತ್ತು, ಈಗ ಅದನ್ನು ಜಾರಿಗೆ ತರಲು ಮುಂದಾದಾಗ ಕ್ಷುಲ್ಲಕ ಕಾರಣಗಳನ್ನು ನೀಡಿ ವಿರೋಧಿಸುತ್ತಿದೆ.

ನಾರಿ ಶಕ್ತಿಯ ಪ್ರಗತಿಗೆ ಕಂಟಕವಾಗಿರುವ ಇಂತಹ ಮಹಿಳಾ ವಿರೋಧಿ ರಾಜಕಾರಣಕ್ಕೆ ದೇಶದ ಮಹಿಳೆಯರು ಮುಂದಿನ ದಿನಗಳಲ್ಲಿ ತಕ್ಕ ಪಾಠ ಕಲಿಸುವುದು ಖಚಿತ ಎಂದು ಅವರು ಹೇಳಿದ್ದಾರೆ.

## ಮೌಂಟ್ ಆಬುನಲ್ಲಿ ರಾಷ್ಟ್ರೀಯ ಮಾಧ್ಯಮ ಸಮ್ಮೇಳನಕ್ಕೆ ಚಾಲನೆಜಾಗತಿಕ ಶಾಂತಿಯಲ್ಲಿ ಮಾಧ್ಯಮದ ಪಾತ್ರದ ಬಗ್ಗೆ ಚರ್ಚೆ

**ಬೀದರ್: ಮೇ.1:** ರಾಜಸ್ಥಾನ ರಾಜ್ಯದ ಅಬುರಾಜ ಪರ್ವತದಲ್ಲಿರುವ ಬ್ರಹ್ಮಕುಮಾರೀಸ್ ಸಂಸ್ಥೆಯ ಪ್ರಧಾನ ಕೇಂದ್ರವಾದ ಜ್ಞಾನ ಸರೋವರ ಆವರಣದಲ್ಲಿ ಗುರುವಾರ ಸಂಜೆ ಐದು ದಿನಗಳ ರಾಷ್ಟ್ರೀಯ ಮಾಧ್ಯಮ ಸಮ್ಮೇಳನವು ಭವ್ಯವಾಗಿ ಆರಂಭಗೊಂಡಿದೆ.

"ಜಾಗತಿಕ ಶಾಂತಿಯ ಅಗತ್ಯತೆ ಮಾಧ್ಯಮದ ಪಾತ್ರ" ಎಂಬ ಮಹತ್ವದ ವಿಷಯದಡಿ ಆಯೋಜಿಸಲಾದ ಈ ಸಮ್ಮೇಳನದಲ್ಲಿ ದೇಶದ ವಿವಿಧ ಭಾಗಗಳಿಂದ 1,000ಕ್ಕೂ ಹೆಚ್ಚು ಪ್ರಮುಖ ಮಾಧ್ಯಮ ಪ್ರತಿನಿಧಿಗಳು, ಪತ್ರಕರ್ತರು ಹಾಗೂ ವಿಷಯ ಸೃಜಕರು ಭಾಗವಹಿಸಿದ್ದಾರೆ.

ಹಾರ್ಮನಿ ಹಾಲ್‌ನಲ್ಲಿ ನಡೆದ ಸ್ವಾಗತ ಕಾರ್ಯಕ್ರಮವನ್ನು ಸಿಸ್ಟರ್ ಬಿ.ಕೆ. ಚಂದಾ ಸಂಯೋಜಿಸಿದರು. ಕಾರ್ಯಕ್ರಮದ ಆರಂಭದಲ್ಲಿ ಬ್ರೋ. ಬಿ.ಕೆ. ಯುಗರತ್ನ ಅವರು ಭಕ್ತಿಗೀತೆ ಮೂಲಕ ಸ್ವಾಗತಿಸಿದರು. ಬಳಿಕ ಆಗ್ರಾದ ಕಾಜೋಲ್ ಡ್ಯಾನ್ಸ್ ಅಕಾಡೆಮಿಯವರಿಂದ ಮನಮೋಹಕ ನೃತ್ಯ ಪ್ರದರ್ಶನ ನಡೆಯಿತು.

ಮುಂಬೈಯ ಮೀಡಿಯಾ ವಿಂಗ್ ರಾಷ್ಟ್ರೀಯ ಸಂಯೋಜಕರಾದ ಬ್ರೋ. ಬಿ.ಕೆ. ನಿಕುಂಜ್ ಅವರು ಸಭಿಕರನ್ನು ಸ್ವಾಗತಿಸಿ, "ಮಾಧ್ಯಮವು ಜಗತ್ತಿಗೆ ಶಾಂತಿಯನ್ನು ತರಬಲ್ಲದೆ?" ಎಂಬ ಪ್ರಶ್ನೆಯನ್ನು ಕೇಳಿದರು. ಸಭಿಕರಿಂದ ಬಂದ ಸಕಾರಾತ್ಮಕ ಪ್ರತಿಕ್ರಿಯೆಯ ನಂತರ, "ನಾವು ಪ್ರತಿಯೊಬ್ಬರೂ ಮಾಧ್ಯಮವೇ" ಎಂಬ ಸಂದೇಶವನ್ನು ನೀಡಿ, ಶಾಂತಿ ಸ್ಥಾಪನೆಗೆ ಪ್ರತಿಯೊಬ್ಬರ ಹೊಣೆಗಾರಿಕೆಯನ್ನು ಒತ್ತಿಹೇಳಿದರು. ಮಾಧ್ಯಮವು ತನ್ನ ಶೀತಲ ಶಕ್ತಿ ಬಳಸಿ ಅಶಾಂತಿಯ ಅಗ್ನಿಯನ್ನು ನಂದಿಸಬೇಕೆಂದು ಕರೆ ನೀಡಿದರು.

ಹೈದರಾಬಾದ್‌ನ ಮೀಡಿಯಾ ವಿಂಗ್ ಉಪಾಧ್ಯಕ್ಷರಾದ ಸಿಸ್ಟರ್ ಬಿ.ಕೆ. ಸರಳಾ ಅವರು ಪ್ರೇರಣಾದಾಯಕ ಭಾಷಣ ಮಾಡಿ, ಮಾಧ್ಯಮ ಪ್ರತಿನಿಧಿಗಳು ದೇವರ ಸಂದೇಶವನ್ನು ಜನರಿಗೆ ತಲುಪಿಸುವ ಮಹತ್ವದ ಹೊಣೆಗಾರಿಕೆ ಹೊಂದಿದ್ದಾರೆ ಎಂದರು. ಬ್ರಹ್ಮಕುಮಾರೀಸ್ ಸಂಸ್ಥೆಯ 25 ವಿಭಾಗಗಳು ಸಮಾಜದ ವಿವಿಧ ಕ್ಷೇತ್ರಗಳಿಗೆ ಪರಿಹಾರ ಒದಗಿಸುತ್ತಿವೆ ಎಂದು ಅವರು ತಿಳಿಸಿದರು.



ಅಬು ರಾನ ಜ್ಞಾನ ಸರೋವರ ನಿರ್ದೇಶಕರಾದ ರಾಜಯೋಗಿನಿ ಬಿ.ಕೆ. ಪ್ರಭಾ ದೀದಿ ಅವರು ಆಶೀರ್ವಚನ ನೀಡಿ, ಶಾಂತಿ ಆತ್ಮದ ಮೂಲ ಸ್ವಭಾವವಾಗಿದೆ ಎಂದು ಹೇಳಿದರು. ಆತ್ಮಜ್ಞಾನದಿಂದ ದೂರವಾದಾಗ ಅಶಾಂತಿ ಉಂಟಾಗುತ್ತದೆ ಎಂಬುದನ್ನು ವಿವರಿಸಿದರು. ಮುಂದಿನ ದಿನಗಳಲ್ಲಿ ಆತ್ಮಜ್ಞಾನವನ್ನು ಅರಿತುಕೊಳ್ಳುವ ಮೂಲಕ ಅಮೂಲ್ಯವಾದ ಜ್ಞಾನ ರತ್ನಗಳನ್ನು ಪಡೆಯಲು ಪ್ರೇರೇಪಿಸಿದರು.

ಮೀಡಿಯಾ ವಿಂಗ್ ರಾಷ್ಟ್ರೀಯ ಸಂಯೋಜಕರಾದ ಬ್ರೋ. ಬಿ.ಕೆ. ಶಂತನು ಅವರು ಮುಂದಿನ ದಿನಗಳಲ್ಲಿ ನಡೆಯಲಿರುವ ವಿವಿಧ ಸತ್ರಗಳ ವಿವರಗಳನ್ನು ನೀಡಿದರು. ಸಮ್ಮೇಳನದಲ್ಲಿ ಪ್ಲೆನರಿ, ಇನ್ಸೈಟ್ ಸೆಷಗಳು ಹಾಗೂ ವೈಯಕ್ತಿಕ ಸಂವಾದ ಕಾರ್ಯಕ್ರಮಗಳು ನಡೆಯಲಿವೆ ಎಂದು ಹೇಳಿದರು.

ಕಾರ್ಯಕ್ರಮದ ಅಂತ್ಯದಲ್ಲಿ ಡಾ. ಬಿ.ಕೆ. ಬಿನ್ನಿ ಅವರು ವಿಶ್ವ ಶಾಂತಿಯಿಗಾಗಿ ಧ್ಯಾನ ಸತ್ರ ನಡೆಸಿ, ನಂತರ ಎಲ್ಲಾ ಭಾಗವಹಿಸಿದವರಿಗೆ ಪ್ರಸಾದ ಹಾಗೂ ದೈವಿಕ ಉಡುಗೊರೆಗಳನ್ನು ವಿತರಿಸಲಾಯಿತು.

ಈ ಸಮ್ಮೇಳನವು ಮಾಧ್ಯಮದ ಮೂಲಕ ಜಾಗತಿಕ ಶಾಂತಿಗೆ ದಾರಿ ಮಾಡಿಕೊಡುವ ಮಹತ್ವದ ವೇದಿಕೆಯಾಗಿ ಪರಿಣಮಿಸುವ ನಿರೀಕ್ಷೆ ವ್ಯಕ್ತವಾಗಿದೆ.

# ಗಳಂಗಳಪ್ಪ ಪಾಟೀಲ್ ಬಸವಾದಿ ಶರಣ ಸಾಹಿತ್ಯ ಕೇಂದ್ರದ ಸಭೆ



**ಕಲಬುರಗಿ:ಮೇ.1:**ಗುಲ್ಬರ್ಗ ವಿಶ್ವವಿದ್ಯಾಲಯದ ಗಳಂಗಳಪ್ಪ ಪಾಟೀಲ್ (ಎಸ್ ಬಿ ಪಾಟೀಲ್) ಬಸವಾದಿ ಶರಣ ಸಾಹಿತ್ಯ ಕೇಂದ್ರದ ಸಭೆ ಕುಲಪತಿಗಳಾದ ಡಾ. ಶಶಿಕಾಂತ ಉಡಿಕೇರಿ ಅವರ ಅಧ್ಯಕ್ಷತೆಯಲ್ಲಿ ಜರುಗಿತು .

ಸಭೆಯಲ್ಲಿ ಕೇಂದ್ರವು ಗುಲ್ಬರ್ಗ ಆಕಾಶವಾಣಿಯ ಸಹಯೋಗದೊಂದಿಗೆ ರಾಜ್ಯಮಟ್ಟದಲ್ಲಿ ಪ್ರಸಾರವಾಗುವ ಪ್ರಾಯೋಜಿತ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಚರ್ಚಿಸಿತು. ಜಿಲ್ಲೆಯ ವಿವಿಧ ಶಾಲಾ ಕಾಲೇಜುಗಳ ಸಹಯೋಗದೊಂದಿಗೆ ಶರಣರ ಸಂದೇಶಗಳನ್ನು ಸಾರುವ ಉಪನ್ಯಾಸಗಳನ್ನು ಹಮ್ಮಿಕೊಳ್ಳಲು ನಿರ್ಧರಿಸಲಾಯಿತು . ಅಜ್ಞಾತ ಶರಣರ ಕುರಿತಾಗಿರುವ ಸಂಶೋಧನಾತ್ಮಕ ಲೇಖನಗಳನ್ನು ಸಂಪಾದಿಸಿ ಪುಸ್ತಕಗಳನ್ನು ಪ್ರಕಟಿಸಲು ಸಮಾಲೋಚಿಸಲಾಯಿತು .

ವಚನ ಸಾಹಿತ್ಯ ಕುರಿತಾಗಿರುವ ಡಿಪ್ಲೋಮಾ/ ಸರ್ಟಿಫಿಕೇಟ್ ಕೋರ್ಸ್ ಗಳನ್ನು ಆರಂಭಿಸಲು ಚಿಂತಿಸಲಾಯಿತು .

ಸಭೆಯಲ್ಲಿ ಕುಲಸಚಿವರಾದ ಡಾ . ರಮೇಶ ಲಂಡನ್ ಕರ್ ,ಕೇಂದ್ರದ ನಿರ್ದೇಶಕರಾದ ಡಾ. ಎಸ್. ಎಂ . ಹನಗೂಡಿಮಠ, ಖಾಯಂ ಸದಸ್ಯರಾದ ಬಂಡಪ್ಪ ಕೇಸುರ್ ,ಡಾ. ವಿ ಜಿ ಅಂದಾನಿ , ಸಲಹಾ ಸಮಿತಿ ನಿರ್ದೇಶಕರಾದ ಡಾ. ಆನಂದ ಪಾಟೀಲ ಸಿದ್ಧಾಮಣಿ .ಡಾ. ಗಣಪತಿ ಸಿನ್ನೂರ್ , ಡಾ. ವೀರಶೆಟ್ಟಿ ಬಿ ಗಾರಂಪಳ್ಳಿ ಹಾಜರಿದ್ದರು

# ಸಿಎಂ ಬದಲಾವಣೆಗೆ ಇನ್ನೂ ಸಮಯ ನಿಗದಿಯಾಗಿಲ್ಲ: ಖರ್ಗೆ



**ಕಲಬುರಗಿ,ಮೇ.1**–ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆಗೆ ಇನ್ನೂ ಸಮಯ ನಿಗದಿಯಾಗಿಲ್ಲ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದರು. ಇಂದಿಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪದೇ ಪದೇ ಮುಖ್ಯಮಂತ್ರಿ ಬದಲಾವಣೆ ಅಂದ್ರೆ ನಾನೇನು ಮಾಡಲಿ ?, ಸಿಎಂ ಬದಲಾವಣೆ ಯಾಗುತ್ತೆ, ಆಗುಲ್ಲ ಅಂತ ಹೇಗೆ ಹೇಳಲಿ ? ಎಂದು ಮಾಧ್ಯಮವರ ಪ್ರಶ್ನೆಗೆ ಖಾರವಾಗಿ ಪ್ರತಿಕ್ರಿಯಸಿದರು.

ಮುಖ್ಯಮಂತ್ರಿ ಬದಲಾವಣೆಗೆ ಇನ್ನೂ ಸಮಯ ನಿಗದಿಯಾಗಿಲ್ಲ. ಈ ಬಗ್ಗೆ ಯಾವುದೇ ಊಹಾಪೋಹ ಮಾಡಬೇಡಿ, ಸುಮ್ಮನೆ ತಪ್ಪು ಸಂದೇಶ ನೀಡಬೇಡಿ ಎಂದು ಖರ್ಗೆ ಮನವಿ ಮಾಡಿದರು. ಸಮಯ ನಿಗದಿಯಾದ ಮೇಲೆ ನಾವೆಲ್ಲ ಅಂದರೆ, ನಾನು, ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಸೇರಿ ಚರ್ಚೆ ಮಾಡುತ್ತೇವೆ. ಏನು ನಿರ್ಣಯ ತೆಗೆದುಕೊಂಡರೆ ಪಕ್ಷದ ಮೇಲೆ ಯಾವ ರೀತಿಯ ಪರಿಣಾಮವಾಗಲಿದೆ ಎಂಬುವುದರ ಬಗ್ಗೆ ಚರ್ಚಿಸುತ್ತೇವೆ ಎಂದು ಹೇಳಿದರು.

ನಿನ್ನೆಯಷ್ಟೇ ರಾಜ್ಯದಲ್ಲಿ ಸದ್ಯಕ್ಕೆ ಮುಖ್ಯಮಂತ್ರಿ ಬದಲಾವಣೆ ವಿಚಾರ ಇಲ್ಲ ಎಂದಿದ್ದ ಖರ್ಗೆ ಅವರು, ಇಂದು ಮುಖ್ಯಮಂತ್ರಿ ಬದಲಾವಣೆಗೆ ಇನ್ನೂ ಸಮಯ ನಿಗದಿಯಾಗಿಲ್ಲ ಎಂದು ಹೇಳುವುದರ ಮೂಲಕ ಕುತೂಹಲ ಮೂಡಿಸಿದ್ದಾರೆ.

ಬುದ್ಧನ ತತ್ವಗಳು ಇಂದಿಗೂ ಪ್ರಸ್ತುತವಾಗಿವೆ. ಬುದ್ಧನ ಅಷ್ಟಾಂಗ ಮಾರ್ಗಗಳು ಜನರಿಗೆ ಪ್ರೇರಣೆಯಾಗಿವೆ. ಪ್ರಪಂಚದಲ್ಲಿ ನಡೆಯುತ್ತಿರುವ ಯದ್ಧ ನಿಲ್ಲಬೇಕು, ಎರಡು ದೇಶಗಳ ನಡುವಿನ ಕಲಹ ನೂರಾರು ದೇಶಗಳಿಗೆ ಸಮಸ್ಯೆಯಾಗಿದೆ. ಪಂಡಿತ್ ಜವಾಹರಲಾಲ್ ನೆಹರು ಅವರಂತೆ ವಿದೇಶ ನೀತಿ ಪಾಲನೆ ಮಾಡಿದರೆ ಉಳಿಯುತ್ತೇವೆ. ನಾವು ಯಾವ ದೇಶದ ಪರ ಸಹ ನಿಲ್ಲಬಾರದು. ಇದನ್ನು ದೇಶದ ಪ್ರಧಾನಿ ಅರ್ಥಮಾಡಿಕೊಳ್ಳಬೇಕು. ಒಂದು ದೇಶ, ಒಬ್ಬ ವ್ಯಕ್ತಿಯ ಪರ ನಿಲ್ಲಬಾರದು ಎಂದು ಖರ್ಗೆ ಹೇಳಿದರು.

ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ದರವನ್ನು 993 ರೂಪಾಯಿಗೆ ಏರಿಕೆ ಮಾಡಿರುವುದಕ್ಕೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆಕ್ರೋಶ ವ್ಯಕ್ತಪಡಿಸಿದರು.

ಎಲ್‌ಪಿಜಿ ಸಿಲಿಂಡರ್ ಕೊರತೆಯಿಂದ ಜನ ಸಾಕಷ್ಟು ಸಮಸ್ಯೆ ಎದುರಿಸುತ್ತಿರುವ ನಡುವೆ ಕೇಂದ್ರ ಸರ್ಕಾರ ವಾಣಿಜ್ಯ ಸಿಲಿಂಡರ್ ಬೆಲೆ ಏರಿಕೆ ಮಾಡುವುದರ ಮೂಲಕ ಮತ್ತಷ್ಟು ಹೊರೆ ಹೇರಿದೆ ಎಂದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE